SEVA BHARATHI
सेवा ही परमो धर्मः

ಸಂಚಿಕೆ : 09
ಸಂಪುಟ : 05

# ಸೇವಾಪಥ

ಸೇವಾಭಾರತಿ(ರಿ.), ಬೆಳ್ತಂಗಡಿ ತಾ॥ ಇದರ
(ರಾಜ್ಯ ಪ್ರಶಸ್ತಿ ಪುರಸ್ಕೃತ ಸೇವಾ ಸಂಸ್ಥೆ-2022)
ಮಾಸಿಕ e-ನ್ಯೂಸ್ ಲೆಟರ್ – ಸೆಪ್ಟೆಂಬರ್ 2024

ಪ್ರಧಾನ ಕಚೇರಿ : ಸೇವಾನಿಕೇತನ, ಕನ್ಯಾಡಿ-॥, ಧರ್ಮಸ್ಥಳ ಅಂಚೆ, ಬೆಳ್ತಂಗಡಿ ತಾಲೂಕು, ದ.ಕ. – 574 216

**7ನೇ ವರ್ಷದ ಸಂಭ್ರಮದಲ್ಲಿ ಸೇವಾಧಾಮ**



## ಕೊಪ್ಪದ ಡಾ. ಉದಯ್‌ಶಂಕರ ಹೆಚ್.ಜಿ. ಇವರಿಗೆ ಸೇವಾಭಾರತಿಯಿಂದ 'ಸೇವಾಶ್ರೇಷ್ಠ 2024' ಪುರಸ್ಕಾರ

## ಉಡುಪಿ ಜಿಲ್ಲಾ ಸಮಾವೇಶ 2024 ಮತ್ತು 26ನೇ ಉಚಿತ ವೈದ್ಯಕೀಯ ತಪಾಸಣೆ ಮಾಹಿತಿ ಹಾಗೂ ಜಾಗೃತಿ ಶಿಬಿರ

## ಅರಸಿನಮಕ್ಕಿಯಲ್ಲಿ 97ನೇ ಬೃಹತ್ ರಕ್ತದಾನ ಶಿಬಿರ

## ಕೊಕ್ಕಡದಲ್ಲಿ 28ನೇ ಉಚಿತ ಟೈಲರಿಂಗ್ ತರಬೇತಿ ಶಿಬಿರ

## ವಿಶ್ವ ಬೆನ್ನುಹುರಿ ಅಪಘಾತ ದಿನಾಚರಣೆ: ಉಡುಪಿ ಮತ್ತು ಉಜಿರೆಯಲ್ಲಿ ಗಾಲಿಕುರ್ಚಿ ಜಾಥಾ

## ತೆಂಗಿನಕಾಯಿ ಸಿಪ್ಪೆ ತೆಗೆಯುವ ಕಾರ್ಯವೇ ಕುಂದಾಪುರದ ಇಕ್ಬಾಲ್ ಕುಟುಂಬಕ್ಕೆ ಆಧಾರವಾಯ್ತು

ಯಶೋಗಾಥೆ

## ನಮ್ಮಿಂದಿಷ್ಟು

ಎಲ್ಲರಿಗೂ ನಮಸ್ಕಾರಗಳು,

ಉಡುಪಿಯಲ್ಲಿ ಮೂರು ದಿನಗಳ ಕಾಲ ಉಚಿತವಾಗಿ ದಿವ್ಯಾಂಗರಿಗೆ 26ನೇ ವಸತಿಸಹಿತ ಆರೋಗ್ಯ ತಪಾಸಣೆ, ಮಾಹಿತಿ ವರ್ಗ, ತರಬೇತಿ ಹಾಗೂ ಗಾಲಿಕುರ್ಚಿ ಜಾಥಾ ಹಮ್ಮಿಕೊಳ್ಳಲಾಗಿತ್ತು. ಈ ವರ್ಷ ಜಿಲ್ಲಾ ಆರೋಗ್ಯಾಧಿಕಾರಿ, ಜಿಲ್ಲಾ ಶಸ್ತ್ರಚಿಕಿತ್ಸಕರವರ ತಂಡ ಪೂರ್ತಿಯಾಗಿ ಶಿಬಿರ ನಡೆಸಲು ಸಹಕಾರ ನೀಡಿರುವುದು ಉಲ್ಲೇಖನೀಯ ಸಂಗತಿ. ಕೂಸಮ್ಮ ಶಂಭು ಶೆಟ್ಟಿ ಹಾಜಿ ಅಬ್ದುಲ್ಲಾ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಈ ಶಿಬಿರ ಏರ್ಪಡಿಸಲಾಗಿತ್ತು.

ಸಪ್ಟೆಂಬರ್ 5 ವಿಶ್ವ ಬೆನ್ನುಹುರಿ ಅಪಘಾತ ದಿನಾಚರಣೆ ಆದ ಕಾರಣ 5ನೇ ತಾರೀಖಿನಂದು ಶಿಬಿರದ ಸಮಾರೋಪ ಆದ ನಂತರ ಉಡುಪಿಯ ಮುಖ್ಯ ಬೀದಿಯಲ್ಲಿ ಗಾಲಿಕುರ್ಚಿ ಜಾಥಾ ನಡೆಯಿತು. ಒಟ್ಟಿನಲ್ಲಿ ದಿವ್ಯಾಂಗರೊಂದಿಗೆ ಜಿಲ್ಲಾ ಆಡಳಿತ, ದಾನಿಗಳು, ವಿವಿಧ ಸಂಸ್ಥೆಗಳ ಪ್ರಮುಖರು ಶಿಬಿರದಲ್ಲಿ ಹಾಗೂ ಜಾಥಾದಲ್ಲಿ ಭಾಗವಹಿಸಿದ್ದರು ಮತ್ತು ಪೂರ್ಣ ಪ್ರಜ್ಞಾ ಕಾಲೇಜಿನ ಎನ್.ಎಸ್.ಎಸ್. ವಿದ್ಯಾರ್ಥಿಗಳು ಸಹಕಾರ ನೀಡಿದರು.

ಈ ಮೂರು ದಿನಗಳ ಅವಧಿಯಲ್ಲಿ ಸ್ಥಳೀಯ ಮೂರು ಕಾಲೇಜುಗಳಲ್ಲಿ ಬೆನ್ನುಹುರಿ ಅಪಘಾತದ ಬಗ್ಗೆ ಅರಿವು ಮೂಡಿಸುವ ಪ್ರಯತ್ನ ಮಾಡಲಾಯಿತು.

ಉಜಿರೆಯಲ್ಲಿ 2ನೇ ವರ್ಷ ಗಾಲಿಕುರ್ಚಿ ಜಾಥಾವನ್ನು ಹಮ್ಮಿಕೊಳ್ಳಲಾಯಿತು. ರೋಟರಿ, ಎಸ್‌ಡಿಎಂನ ಎನ್‌ಎಸ್‌ಎಸ್ ಘಟಕದವರು ಸಹಭಾಗಿಗಳಾಗಿ ಜಾಥಾದ ಯಶಸ್ವಿಗೆ ಕಾರಣೀಕರ್ತರಾದರು ಹಾಗೂ ವೈದ್ಯರಿಂದ ಸಮಾಲೋಚನೆಯನ್ನು ನಡೆಸಲಾಯಿತು.

97ನೇ ರಕ್ತದಾನ ಶಿಬಿರವು ಹತ್ಯಡ್ಕದ ಪ್ರಾಥಮಿಕ ಕೃಷಿಪತ್ತಿನ ನೇತೃತ್ವದಲ್ಲಿ ಹಲವು ಸಂಘಸಂಸ್ಥೆಗಳ ಸಹಕಾರದಲ್ಲಿ ಯಶಸ್ವಿಯಾಯಿತು. 106 ಮಂದಿ ದಾನಿಗಳಿಂದ ರಕ್ತ ಸಂಗ್ರಹಿಸಲಾಯಿತು. ಸೊಸೈಟಿಯ ಅಧ್ಯಕ್ಷರಾದ ಶ್ರೀ ರಾಘವೇಂದ್ರ ನಾಯಕರ ಯಶಸ್ವಿ ನೇತೃತ್ವ, ಮಾರ್ಗದರ್ಶನ ಹಾಗೂ ಸಹಭಾಗಿತ್ವದಲ್ಲಿ ಈ ಶಿಬಿರ ಯಶಸ್ವಿಗೆ ಕಾರಣವಾಯಿತು.

ಸಬಲಿನಿ ಯೋಜನೆಯಡಿ ಮಹಿಳೆಯರಿಗೆ 28ನೇ ಉಚಿತ ಟೈಲರಿಂಗ್ ತರಬೇತಿ ಶಿಬಿರವು ಕೊಕ್ಕಡದಲ್ಲಿ ಪ್ರಾರಂಭಗೊಂಡಿತು. ದಾಖಲೆಯ ಮಟ್ಟದಲ್ಲಿ ಶಿಬಿರಾರ್ಥಿಗಳು ಭಾಗವಹಿಸುತ್ತಿರುವುದು ಗಮನಾರ್ಹ. ಸುಮಾರು 63 ಮಂದಿ ಶಿಬಿರಾರ್ಥಿಗಳು ಭಾಗವಹಿಸಿದ್ದಾರೆ ಎಂದರೆ ಸ್ವಾವಲಂಬಿ ಜೀವನಕ್ಕಾಗಿ ಮುಂದಡಿಯಿಟ್ಟ ಮಹಿಳೆಯರು ಎನ್ನಬಹುದು. ಒಟ್ಟಿನಲ್ಲಿ ಈ ಮೂಲಕ ಅವರ ಕುಟುಂಬ ಸ್ವಾಲಂಬಿಗೊಂಡು ಸಬಲಗೊಳ್ಳಲಿ.

16 ಸಪ್ಟೆಂಬರ್ 2018 ರಂದು ಪ್ರಾರಂಭಗೊಂಡ ಸೇವಾಧಾಮವು 7ನೇ ವರ್ಷಕ್ಕೆ ಕಾಲಿಟ್ಟಿದೆ. ಇಂದು ಅನೇಕರ ಬಾಳಲ್ಲಿ ವಿಶ್ವಾಸ ತುಂಬುವ, ಆ ಕುಟುಂಬದ ಆಶಾಕಿರಣವಾಗಿ ಸೇವಾಧಾಮದ ಹೆಜ್ಜೆಗಳು ಗಣನೀಯವಾಗಿ ಧನಾತ್ಮಕವಾಗಿದೆ. ಈ ಯಶಪಯಣಕ್ಕೆ ನಮ್ಮೊಂದಿಗಿದ್ದು ಸಹಕರಿಸಿದ ಕೊಡುಗೈ ದಾನಿಗಳು, ಸಂಸ್ಥೆಗಳು, ಸ್ವಯಂಸೇವಕರು, ಕಾರ್ಯಕರ್ತರು ಹಾಗೂ ಸಿಬ್ಬಂದಿಗಳನ್ನು ಈ ಸಂದರ್ಭದಲ್ಲಿ ಸ್ಮರಿಸಿ ಕೃತಜ್ಞತೆ ಸಲ್ಲಿಸಲೇಬೇಕಿದೆ. ಇದರ ಪ್ರಾರಂಭಕ್ಕೆ ಕೈಜೋಡಿಸಿದ ಬೆಂಗಳೂರಿನ APD ಗೆ ನಾವು ಚಿರಋಣಿಗಳು. APDಯ ನೈತಿಕ, ತಾಂತ್ರಿಕ ಹಾಗೂ ಆರ್ಥಿಕ ಸಹಕಾರಗಳು ನಾವು ಬೆಳೆಯಲು ಕಾರಣವಾಗಿದೆ.

*ಸೇವಾ ಹೀ ಪರಮೋ ಧರ್ಮಃ*

ಇತೀ ತಮ್ಮವ, **ಕೆ. ವಿನಾಯಕ ರಾವ್**

## ನಮ್ಮ ವಿಳಾಸ

**ಪ್ರಧಾನ ಕಚೇರಿ :**

ಸೇವಾನಿಕೇತನ, ಕನ್ಯಾಡಿ–II
ಧರ್ಮಸ್ಥಳ ಗ್ರಾಮ, ಬೆಳ್ತಂಗಡಿ ತಾಲೂಕು – 574 216
ಮೊ.: 99454 91241

**ಸೇವಾ ಕೇಂದ್ರ :**

ಸೇವಾಧಾಮ
(ಬೆನ್ನುಹುರಿ ಅಪಘಾತಕ್ಕೊಳಗಾದವರಿಗಾಗಿ ಪುನಶ್ಚೇತನ ಕೇಂದ್ರ)
ಸೌತಡ್ಕ ಶ್ರೀ ಮಹಾಗಣಪತಿ ದೇವಸ್ಥಾನದ ಬಳಿ
ಕೊಕ್ಕಡ ಗ್ರಾಮ – 574 198
ಮೊ.: 94482 54888

## ನಮ್ಮ ತಂಡ

| | |
|---|---|
| ಶ್ರೀಮತಿ ಸ್ವರ್ಣಗೌರಿ | – ಅಧ್ಯಕ್ಷರು |
| ಶ್ರೀ ಕೆ. ಯು. ಗಿರೀಶ್ ರಾವ್ | – ಉಪಾಧ್ಯಕ್ಷರು |
| ಶ್ರೀ ಕೆ. ಬಾಲಕೃಷ್ಣ | – ಕಾರ್ಯದರ್ಶಿ |
| ಶ್ರೀ ಕೆ. ವಿನಾಯಕ ರಾವ್ | – ಖಜಾಂಚಿ |
| ಶ್ರೀ ಬಿ. ಕೃಷ್ಣಪ್ಪ ಗುಡಿಗಾರ್ | – ಟ್ರಸ್ಟಿ |
| ಶ್ರೀ ವಿಷ್ಣುಪ್ರಸಾದ್ ತೆಂಕಿಲ್ಲಾಯ | – ಟ್ರಸ್ಟಿ |

## ಸಲಹಾ ಮಂಡಳಿ

1. ಶ್ರೀ CA ಗುಜ್ಜಾಡಿ ಪ್ರಭಾಕರ ನರಸಿಂಹ ನಾಯಕ್
2. ಡಾ. ಎ. ಜಯಕುಮಾರ್ ಶೆಟ್ಟಿ
3. ಶ್ರೀಮತಿ ಮನೋರಮ ಭಟ್
4. ಶ್ರೀ ಉದಯಶಂಕರ್
5. ಶ್ರೀ ವಿಜಯ ಕೊಡವೂರು
6. ಶ್ರೀಮತಿ ಜೊಯ್ಸ್ ಫಿರೇರಾ
7. ಶ್ರೀ ನಾಗೇಂದ್ರ ಮಾಗಡಿ
8. ಶ್ರೀ ರಜತ್‌ರಾವ್, ಧರ್ಮಸ್ಥಳ
9. ಶ್ರೀ ಗಣೇಶ್ ಶೆಂಡ್ಯೆ
10. ಡಾ. ಮುರಳೀಧರ ನಾಯಕ್

## ಸಂಚಾಲಕರು

ಶ್ರೀ ಕೆ. ಪುರಂದರ ರಾವ್

# ಉಡುಪಿ ಜಿಲ್ಲಾ ಸಮಾವೇಶ 2024 ಮತ್ತು 26ನೇ ಉಚಿತ ವೈದ್ಯಕೀಯ ತಪಾಸಣೆ ಮಾಹಿತಿ ಹಾಗೂ ಜಾಗೃತಿ ಶಿಬಿರ



ಸೇವಾಭಾರತಿ ಕನ್ಯಾಡಿ ಮತ್ತು ದಿವ್ಯಾಂಗ ರಕ್ಷಣಾ ಸಮಿತಿ ಉಡುಪಿ ಜಿಲ್ಲೆ ಇವುಗಳ ಆಶ್ರಯದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ವಿಶೇಷ ಚೇತನರ ಸಬಲೀಕರಣ ಇಲಾಖೆಗಳ ಸಹಕಾರದಲ್ಲಿ ವಿಶ್ವ ಬೆನ್ನುಹುರಿ ಅಪಘಾತ ದಿನಾಚರಣೆಯ ಪ್ರಯುಕ್ತ 3 ದಿನಗಳ ಉಡುಪಿ ಜಿಲ್ಲಾ ಸಮಾವೇಶ – 2024 ಮತ್ತು 26ನೇ ಉಚಿತ ವೈದ್ಯಕೀಯ ತಪಾಸಣೆ ಮಾಹಿತಿ ಹಾಗೂ ಜಾಗೃತಿ ಶಿಬಿರದ ಉದ್ಘಾಟನಾ ಸಮಾರಂಭವು ಸಪ್ಟೆಂಬರ್ 4 ರಂದು ಉಡುಪಿಯ ಅಜ್ಜರಕಾಡಿನಲ್ಲಿರುವ ಜಿಲ್ಲಾಸ್ಪತ್ರೆಯಲ್ಲಿ ನಡೆಯಿತು.

ಕಾರ್ಯಕ್ರಮವನ್ನು ಉಡುಪಿ ಜಿಲ್ಲಾ ಶಸ್ತ್ರಚಿಕಿತ್ಸಕರಾದ ಡಾ. ಅಶೋಕ್ ಉದ್ಘಾಟಿಸಿ, ಅಂಗವಿಕಲರ ಪ್ರಮಾಣ ಪತ್ರವನ್ನು ಈ ಹಿಂದೆ ಜಿಲ್ಲಾಸ್ಪತ್ರೆಯಲ್ಲಿ ಮಾತ್ರ ವಿತರಿಸಲಾಗುತ್ತಿತ್ತು, ಇದೀಗ ತಾಲೂಕು ಆಸ್ಪತ್ರೆಗಳಲ್ಲಿಯೂ ವೈದ್ಯರ ಪ್ರಮಾಣ ಪತ್ರ ನೀಡಲು ಕ್ರಮ ವಹಿಸಲಾಗಿದೆ. ಹಾಗಾಗಿ ಉಡುಪಿ ಜಿಲ್ಲೆಯಲ್ಲಿ 109 ಮಂದಿ ಬೆನ್ನುಹುರಿ ಸಮಸ್ಯೆಯಿಂದ ಬಳಲುತ್ತಿದ್ದವರಲ್ಲಿ ಆತ್ಮಸ್ಥೈರ್ಯವನ್ನು ಇನ್ನಷ್ಟು ಹೆಚ್ಚುಮಾಡಿ ಅವರಿಗೆ ಧೈರ್ಯ ತುಂಬಬೇಕು ಎಂದು ಕಾರ್ಯಕ್ರಮಕ್ಕೆ ಶುಭಹಾರೈಸಿದರು.

ಸೇವಾಭಾರತಿ ಸಲಹಾ ಮಂಡಳಿ ಸದಸ್ಯರಾದ CA ಗುಜ್ಜಾಡಿ ಪ್ರಭಾಕರ ನರಸಿಂಹ ನಾಯಕ್ ಸಂಸ್ಥೆಯ ಸೇವಾಕಾರ್ಯಗಳ ನಿರಂತರತೆ ಮತ್ತು ಪಾರದರ್ಶಕತೆಯನ್ನು ಶ್ಲಾಘಿಸಿ ದಿಕ್ಸೂಚಿ ಭಾಷಣ ನೀಡಿದರು.

ಉಡುಪಿ ಜಿಲ್ಲೆಯ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಕಲ್ಯಾಣ ಅಧಿಕಾರಿಯಾಗಿರುವ ಶ್ರೀಮತಿ ರತ್ನಸುವರ್ಣ ಸೇವಾಭಾರತಿ ವತಿಯಿಂದ ನೀಡಿದ್ದ ಮನವಿಯನ್ನು ಸ್ವೀಕರಿಸಿ ಬೆನ್ನುಹುರಿ ಅಪಘಾತಕ್ಕೆ ಒಳಗಾದ ದಿವ್ಯಾಂಗರಿಗೆ ಮಾಸಾಸನ ರೂ. 5000, ವಿಕಲಚೇತನರಿಗೆ ಚೈತನ್ಯ ಗಾಲಿಕುರ್ಚಿ ನೀಡುವಂತೆ ಹಾಗೂ ಆರೈಕೆದಾರರಿಗೆ ಭತ್ಯೆ ಸಂಬಂಧಿಸಿದಂತೆ ಅತಿ ಶೀಘ್ರವಾಗಿ ಆಯುಕ್ತರ ಗಮನಕ್ಕೆ ತರುವ ಜವಾಬ್ದಾರಿಯನ್ನು ತೆಗೆದುಕೊಳ್ಳುತ್ತೇನೆ ಎಂದು ಕಾರ್ಯಕ್ರಮಕ್ಕೆ ಶುಭಹಾರೈಸಿದರು. ಬೆನ್ನುಹುರಿ ಅಪಘಾತಕ್ಕೊಳಗಾದ ದಿವ್ಯಾಂಗರಿಗೆ ಅವರ ವ್ಯಾಪ್ತಿಗೆ ಬರುವ ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ ಹಾಗೂ ಎಲ್ಲಾ ಸರಕಾರಿ ಆಸ್ಪತ್ರೆಗಳಿಂದ ಉಚಿತವಾಗಿ ಮೆಡಿಕಲ್ ಕಿಟ್, ಸೆಲ್ಫ್‌ಕೇರ್ ಕಿಟ್ ನೀಡುವಂತೆ ಸಂಸ್ಥೆಯ ವತಿಯಿಂದ ಮನವಿ ಸಲ್ಲಿಸಲಾಯಿತು.

ಕೊಪ್ಪ ಪ್ರಶಮನೀ ಆಸ್ಪತ್ರೆಯ ಆರ್ಥೋಪೆಡಿಕ್ ಸರ್ಜನ್ ಡಾ. ಉದಯಶಂಕರ ಎಚ್.ಜಿ ಇವರು ಮಾಡಿದಂತಹ ಸೇವಾಕಾರ್ಯಗಳನ್ನು ಗುರುತಿಸಿ, ಸೇವಾಭಾರತಿ ಸಂಸ್ಥೆಯ ವತಿಯಿಂದ "ಸೇವಾಶ್ರೇಷ್ಠ –2024" ಗೌರವವನ್ನು ನೀಡಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಸೇವಾಭಾರತಿ ಕನ್ಯಾಡಿಯ, ಅಧ್ಯಕ್ಷರಾದ ಶ್ರೀಮತಿ ಸ್ವರ್ಣಗೌರಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ರೋಟರಿ ಕ್ಲಬ್ ಝೋನ್– 4 ಅಸಿಸ್ಟೆಂಟ್ ಗವರ್ನರ್ ರೊ। ಜಗನ್ನಾಥ್ ಕೋಟೆ, ಉಡುಪಿಯ ಭಾರತ್ ವಿಕಾಸ ಪರಿಷತ್ ಭಾರ್ಗವ ಶಾಖೆ ಸಂಚಾಲಕರಾದ ಶ್ರೀ ವಸಂತ ಭಟ್, ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಶಿಬಿರದಲ್ಲಿ ನ್ಯೂರೋಲಜಿಸ್ಟ್ ಸಮಾಲೋಚನೆ, ಆರ್ಥೋಪೆಡಿಕ್ ವೈದ್ಯರ ಸಮಾಲೋಚನೆ, ಕಣ್ಣಿನ ತಪಾಸಣೆ, ಹಲ್ಲಿನ ತಪಾಸಣೆ, ಅಬ್ಡಮಿನಲ್ ಸ್ಕ್ಯಾನಿಂಗ್, ಜನರಲ್ ವೈದ್ಯ (physician) ರಿಂದ ಸಮಾಲೋಚನೆ, ಫಿಜಿಯೋಥೆರಪಿಸ್ಟ್‌ನಿಂದ ಫಿಸಿಯೋಥೆರಪಿಗಳ ಬಗ್ಗೆ ತರಬೇತಿ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಗಾಲಿಕುರ್ಚಿಯನ್ನು ಸುರೇಶ್ ಕೋಟೇಶ್ವರ ಉಡುಪಿ ಇವರಿಗೆ ಉಡುಪಿ ಜಿಲ್ಲೆಯ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಕಲ್ಯಾಣ ಅಧಿಕಾರಿ ಶ್ರೀಮತಿ ರತ್ನ ಸುವರ್ಣ ಹಸ್ತಾಂತರಿಸಿದರು. ಒಟ್ಟು 15 ಮಂದಿ ಶಿಬಿರಾರ್ಥಿಗಳು ಶಿಬಿರದಲ್ಲಿ ಪಾಲ್ಗೊಂಡಿದ್ದರು.

ನಗರಸಭಾ ಸದಸ್ಯರು ಮತ್ತು ದಿವ್ಯಾಂಗರ ರಕ್ಷಣಾ ಸಮಿತಿ ಸಂಚಾಲಕರಾದ ಶ್ರೀ ವಿಜಯ ಕೊಡವೂರು ಪ್ರಾಸ್ತಾವಿಕ ನುಡಿಗಳನ್ನಾಡಿದರು.



ಸೇವಾಧಾಮದ ಸಂಸ್ಥಾಪಕರಾದ ಶ್ರೀ ಕೆ.ವಿನಾಯಕ ರಾವ್ ಸ್ವಾಗತಿಸಿ. ಡಾಕ್ಯುಮೆಂಟೇಶನ್, ಮಾನಿಟರಿಂಗ್ ಮತ್ತು ಇವಲ್ಯೂವೇಟಿಂಗ್ ಕೋಆರ್ಡಿನೇಟರ್ ಸುಮ ಹಾಗೂ ಹಿರಿಯ ಪ್ರಬಂಧಕರಾದ ಚರಣ್ ಕುಮಾರ್ ಎಂ. ಕಾರ್ಯಕ್ರಮವನ್ನು ನಿರೂಪಿಸಿ, ಅನುಸರಣೆ ಮತ್ತು ಹಣಕಾಸು ವ್ಯವಸ್ಥಾಪಕ ಮೋಹನ್ ಎಸ್. ಧನ್ಯವಾದವಿತ್ತರು.

*Abled does not mean enabled. Disabled does not mean less abled*

# ಅರಸಿನಮಕ್ಕಿಯಲ್ಲಿ 97ನೇ ಬೃಹತ್ ರಕ್ತದಾನ ಶಿಬಿರ

## 106 ಯುನಿಟ್ ರಕ್ತ ಸಂಗ್ರಹ






ಹತ್ಯಡ್ಕ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘ (ನಿ.), ಅರಸಿನಮಕ್ಕಿ ಇದರ ನೇತೃತ್ವದಲ್ಲಿ ಹಾಗೂ ವಿವಿಧ ಸಂಘ–ಸಂಸ್ಥೆಗಳ ಸಹಭಾಗಿತ್ವದಲ್ಲಿ ಮತ್ತು ರೋಟರಿ ಕ್ಯಾಂಪ್ಕೋ ಬ್ಲಡ್ ಸೆಂಟರ್, ಪುತ್ತೂರು ಮತ್ತು ಇಂಡಿಯನ್ ರೆಡ್‌ಕ್ರಾಸ್ ಲೇಡಿಗೋಶನ್ ಆಸ್ಪತ್ರೆ, ಮಂಗಳೂರು ಇವುಗಳ ಸಹಯೋಗದಲ್ಲಿ ಮತ್ತು ಆರೋಗ್ಯ ಸಂಯೋಜನೆಯಡಿ ಸೇವಾಭಾರತಿ (ರಿ.), ಕನ್ಯಾಡಿ ಇದರ ಸಂಯೋಜನೆಯಲ್ಲಿ ಸಪ್ಟೆಂಬರ್ 15 ರಂದು 97ನೇ ಬೃಹತ್ ರಕ್ತದಾನ ಶಿಬಿರವು ಅರಸಿನಮಕ್ಕಿಯ ಹತ್ಯಡ್ಕ ಸಿ.ಎ. ಬ್ಯಾಂಕ್ ಸಭಾಂಗಣದಲ್ಲಿ ಜರುಗಿತು.

ಮಲ್ನಾಡು ವಸ್ತ್ರಲಾಯ ಅರಸಿನಮಕ್ಕಿ ಮಾಲಕರಾದ ಶ್ರೀ ಧರ್ಣಪ್ಪ ಗೌಡ ಉದ್ಘಾಟಿಸಿ, ರಕ್ತದಾನ ಮಾಡುವುದು ಒಂದು ಮಹತ್ತರವಾದ ಕಾರ್ಯ ಎಲ್ಲರೂ ಅದನ್ನು ಮಾಡಲು ಸಾಧ್ಯವಿಲ್ಲ. ಒಬ್ಬ ವ್ಯಕ್ತಿ ರಕ್ತದಾನ ಮಾಡುವುದರಿಂದ ನಾಲ್ಕು ಜನರ ಬದುಕಿಗೆ ಬೆಳಕು ಚೆಲ್ಲಿದಂತಾಗುತ್ತದೆ ಎಂದು ತಿಳಿಸಿ, ಕಾರ್ಯಕ್ರಮಕ್ಕೆ ಶುಭಹಾರೈಸಿದರು.

ಬೆಳ್ತಂಗಡಿ ರೋಟರಿ ಕ್ಲಬ್ ಸದಸ್ಯರಾದ ಉದಯ ಶಂಕರ್‌ರವರು ಮಾತನಾಡಿ ರಕ್ತದಾನದ ಮಹತ್ವ ಮತ್ತು ಆದರಿಂದ ನಮ್ಮ ದೇಹಕ್ಕೆ ಆಗುವ ಪ್ರಯೋಜನ ಮತ್ತು ಆಯೋಜನೆಗೆ ಸಹಕರಿಸುತ್ತಿರುವ ಅರಸಿನಮಕ್ಕಿ – ಶಿಶಿಲ ಶೌರ್ಯ ವಿಪತ್ತು ಘಟಕದವರು ಮಾಡುವ ಉತ್ತಮ ಸಮಾಜಮುಖಿ ಚಟುವಟಿಕೆಗಳಿಗೆ ಪ್ರಶಂಸೆ ವ್ಯಕ್ತಪಡಿಸಿದರು.

ಹತ್ಯಡ್ಕ ಪ್ರಾಥಮಿಕ ಕೃಷಿಪತ್ತಿನ ಸಹಕಾರಿ ಸಂಘ(ನಿ.), ಅರಸಿನಮಕ್ಕಿ ಅಧ್ಯಕ್ಷರಾದ ಶ್ರೀ ರಾಘವೇಂದ್ರ ನಾಯಕ್ ಬರ್ಗುಳ ಅಧ್ಯಕ್ಷತೆಯಲ್ಲಿ ನಡೆದ ಶಿಬಿರದಲ್ಲಿ ಸೇವಾಧಾಮ ಸಂಸ್ಥಾಪಕರಾದ ಕೆ.ವಿನಾಯಕ ರಾವ್, ಡಾ. ಹರ್ಷಿತ ಸುವಿನ್ ದುರ್ಗಾ ಕ್ಲಿನಿಕ್ ಅರಸಿನಮಕ್ಕಿ, ರಕ್ತನಿಧಿ ವಿಭಾಗದ ಜಿಲ್ಲಾ ಸಂಯೋಜಕರಾದ ಪ್ರವೀಣ್ ಕುಮಾರ್, ಸಂಘದ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ ರವಿಚಂದ್ರ ರಾವ್, ಶಿಬಾಜೆ ಗ್ರಾಮ ಪಂಚಾಯತ್ ಅಧ್ಯಕ್ಷರು ರತ್ನ ಬಿ, ರೋಟರಿ ಕ್ಯಾಂಪ್ಕೋ ಬ್ಲಡ್ ಬ್ಯಾಂಕ್ ಮೆಡಿಕಲ್ ಆಫೀಸರ್ ಡಾ. ಕೆ.ಸೀತಾರಾಮ ಭಟ್‌ರವರುಗಳು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಶಿಬಿರದ ಯಶಸ್ಸಿಗೆ ರೋಟರಿ ಕ್ಲಬ್ ಬೆಳ್ತಂಗಡಿ, ಶೌರ್ಯ ವಿಪತ್ತು ನಿರ್ವಹಣಾ ಘಟಕ ಶಿಶಿಲ ಅರಸಿನಮಕ್ಕಿ, ನವಶಕ್ತಿ ರಿಕ್ಷಾ ಚಾಲಕ – ಮಾಲಕರ ಸಂಘ ಅರಸಿನಮಕ್ಕಿ, ಚೈತನ್ಯ ಮಿತ್ರ ಕಲಾ ವೃಂದ (ರಿ.), ಅರಸಿನಮಕ್ಕಿ, ಹಾಲು ಉತ್ಪಾದಕರ ಸಹಕಾರಿ ಸಂಘ ಅರಸಿನಮಕ್ಕಿ, ಅಶ್ವಮೇಧ ಫ್ರೆಂಡ್ಸ್ ಅರಸಿನಮಕ್ಕಿ, ಗ್ರಾಮ ಪಂಚಾಯತ್ ಅರಸಿನಮಕ್ಕಿ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ (ರಿ.), ಅರಸಿನಮಕ್ಕಿ ವಲಯ, ವನದುರ್ಗಾ ಗೆಳೆಯರ ಬಳಗ ಅರಿಕೆಗುಡ್ಡೆ ಹತ್ಯಡ್ಕ, ಕಾಪು – ಉಳ್ಳಾಲ್ತಿ ಗೆಳೆಯರ ಬಳಗ, ಉಪ್ಪರಡ್ಕ, ಸ್ವಸ್ತಿಕ್ ಫ್ರೆಂಡ್ಸ್ ಬೂಡಮಕ್ಕಿ, ಕಪಿಲಕೇಸರಿ ಗೆಳೆಯರ ಬಳಗ ಕುಂಟಾಲಪಳಿಕೆ, ಗ್ರಾಮ ಪಂಚಾಯತ್ ಶಿಶಿಲ, ಶ್ರೀ ದುರ್ಗಾಪರಮೇಶ್ವರಿ ಯುವಕ ಮಂಡಲ ವೈಕುಂಠಪುರ ಶಿಶಿಲ, ಹಾಲು ಉತ್ಪಾದಕರ ಸಹಕಾರಿ ಸಂಘ ಶಿಶಿಲ, ಹಿಂದೂ ಜಾಗರಣಾ ವೇದಿಕೆ ಶಿಶಿಲ, ಬ್ರಹ್ಮಶ್ರೀ ಫ್ರೆಂಡ್ಸ್ ಪಟ್ಲ ಶಿಶಿಲ, ದೇನೋಡಿ ಗೆಳೆಯರ ಬಳಗ ಶಿಶಿಲ, ಆಟೋ ಚಾಲಕ ಮಾಲಕರ ಸಂಘ ಶಿಶಿಲ, ಜೈ ಶ್ರೀರಾಮ್ ಗೆಳೆಯರ ಬಳಗ ಶಿಬಾಜೆ, ಶ್ರೀ ರಾಜರಾಜೇಶ್ವರಿ ಭಜನಾ ಮಂಡಳಿ (ರಿ.), ಪೆರ್ಲ, ವಿಶ್ವ ಹಿಂದೂ ಪರಿಷತ್ ಬಜರಂಗದಳ, ರೇಖ್ಯ, ಹಾಲು ಉತ್ಪಾದಕರ ಸಹಕಾರಿ ಸಂಘ ರೆಖ್ಯ, ಗ್ರಾಮ ಪಂಚಾಯತ್ ಶಿಬಾಜೆ ಸಹಕರಿಸಿದ್ದಾರೆ.

ಸೇವಾಭಾರತಿ ಸಂಸ್ಥೆಯ ಅನುಸರಣೆ ಮತ್ತು ಹಣಕಾಸು ವ್ಯವಸ್ಥಾಪಕ ಮೋಹನ್ ಎಸ್. ನಿರೂಪಿಸಿ, ಹತ್ಯಡ್ಕ ಪ್ರಾಥಮಿಕ ಕೃಷಿ ಪತ್ತಿನ ನಿರ್ದೇಶಕರಾದ ಮುರಳಿಧರ್ ಶೆಟ್ಟಿಗಾರ್ ಕಾರ್ಯಕ್ರಮವನ್ನು ಸ್ವಾಗತಿಸಿ, ಸಂಘದ ಅಧ್ಯಕ್ಷರಾದ ರಾಘವೇಂದ್ರ ನಾಯಕ್ ಧನ್ಯವಾದವಿತ್ತರು. ಈ ಶಿಬಿರದಲ್ಲಿ 7 ಮಂದಿ ಮಹಿಳಾ ರಕ್ತದಾನಿಗಳು ಸಹಿತ ಒಟ್ಟು 106 ಮಂದಿ ರಕ್ತದಾನಿಗಳಿಂದ ರಕ್ತವನ್ನು ಸಂಗ್ರಹಿಸಲಾಯಿತು.

## ಸೆಪ್ಟೆಂಬರ್ ತಿಂಗಳಲ್ಲಿ ಉಚಿತ ಮತ್ತು ರಿಯಾಯಿತಿ ದರದಲ್ಲಿ ವಾಕರ್ ವಿತರಣೆ



ಶ್ರೀ ಅಜಿತ್ ಸುವರ್ಣ
ಬನ್ನಂಜೆ

*I dont need easy, I just need possible*

## ಸೇವಾನಿಧಿ ದಾನಿಗಳು

ಶ್ರೀ ಕೆ.ವಿನಾಯಕ ರಾವ್, ಕನ್ಯಾಡಿ
ಶ್ರೀಮತಿ ಸ್ವರ್ಣಗೌರಿ, ಧರ್ಮಸ್ಥಳ
ಶ್ರೀ ಕಾರ್ತಿಕ್ ಕೆ, ನೇತ್ರಾವತಿ
ಶ್ರೀ ಮಧುಸೂದನ್ ಎಂ.ಜಿ, ಉಜಿರೆ
ಶ್ರೀ ಬಿ.ಪುರಂದರ, ಕನ್ಯಾಡಿ
ಶ್ರೀ ರಜತ್ ಕುಮಾರ್ ಜೆ.ಡಿ, ವೇಣೂರು
ಶ್ರೀ ಅದ್ವೈತ್ ಪೈ, ಕನ್ಯಾಡಿ
ಶ್ರೀಮತಿ ವಸಂತಿ ಗೌಡ, ದೊಂಡೋಲೆ
ಶ್ರೀಮತಿ ಶಾಂತಕುಮಾರಿ, ಉಜಿರೆ
ಶ್ರೀ ರಾಘವೇಂದ್ರ ಶಾಸ್ತ್ರಿ, ಧರ್ಮಸ್ಥಳ
ಶ್ರೀ ಡಿ.ಎನ್ ಗಿರೀಶ್, ಧರ್ಮಸ್ಥಳ
ಶ್ರೀ ರಾಮದಾಸ್ ಭಂಡಾರ್ಕರ್, ಹಳೆಪೇಟೆ
ಶ್ರೀ ಸೂರ್ಯನಾರಾಯಣ ನಾವೂರ್ ದೊಂಡೋಲೆ
ಶ್ರೀ ಉದಯಶಂಕರ್, ಅರಸಿನಮಕ್ಕಿ
ಶ್ರೀ ಶ್ರೀಧರ್ ಕೆ.ವಿ, ಉಜಿರೆ
ಶ್ರೀ ಪುರುಷೋತ್ತಮ ಡಿ.ಎ, ಧರ್ಮಸ್ಥಳ
ಶ್ರೀ ಶಿವಕುಮಾರ್ ಆರ್ಟ್ಸ್, ಹಳೆಪೇಟೆ
ಶ್ರೀ ಸುನಿಲ್ ಕುಮಾರ್ ಜೈನ್, ನೇತ್ರಾವತಿ
ಡಾ. ರಾಮಕೃಷ್ಣ ಭಟ್, ಕನ್ಯಾಡಿ
ಶ್ರೀಮತಿ ಬಬಿತಾ, ಕನ್ಯಾಡಿ
ಶ್ರೀಮತಿ ಸವಿತಾ ಎಂ.ರಾವ್, ಕನ್ಯಾಡಿ
ಶ್ರೀ ಜಯಾನಂದ ಎಂ, ಕನ್ಯಾಡಿ
ಶ್ರೀ ಮದ್ವಮೂರ್ತಿ, ಉಡುಪಿ
ಶ್ರೀ ರಾಜೇಶ್ ಫಡ್ಕೆ, ಕೆಲ್ಲಗುತ್ತು
ವೆಲ್ವೆಟ್ ಟ್ರಾವೆಲ್ಸ್, ಬೆಂಗಳೂರು
ಸಂತೃಪ್ತಿ ಆರ್ ಪಡ್ಕೆ, ಕೆಲ್ಲಾಗುತ್ತು
ಶ್ರೀ ಅವಿನಾಶ್ ಶೆಟ್ಟಿ, ನೇತ್ರಾವತಿ
ಶ್ರೀ ಬಾಲಕೃಷ್ಣ ರಾವ್, ಕನ್ಯಾಡಿ
ಶ್ರೀ ಮದ್ವರಾಜ್ ಎಂ.ಜಿ, ಧರ್ಮಸ್ಥಳ
ಶ್ರೀ ಕೆ.ಪುರಂದರ ರಾವ್, ದೊಂಡೋಲೆ
ಶ್ರೀಮತಿ ಜಯಂತಿ ಪಿ.ರಾವ್, ದೊಂಡೋಲೆ
ಶ್ರೀ ಸಂತೋಷ್ (ಸ್ವಸ್ತಿಕ್ ಸ್ಟೋರ್), ಕೊಕ್ಕಡ
ಶ್ರೀ ನಿತಿನ್ (ಬಾಂಬೆಡೈನ್), ಉಜಿರೆ
ಶ್ರೀ ಅಕ್ಷಯ್ ಪಾಟಾಲಿ, ಪುತ್ತೂರು
ಶ್ರೀಮತಿ ದಿವ್ಯಾ ಪುರಂದರ, ಬೆಂಗಳೂರು
ಶ್ರೀ ರಾಜಾರಾಮ್ ಕಾರಂತ್, ಬೆಂಗಳೂರು
ಬೇಬಿ. ಶ್ರೀ ಬಿಲ್ವಾನಿ, ಉಜಿರೆ
ಶ್ರೀ ಅರ್ಜುನ್, ತೀರ್ಥಹಳ್ಳಿ
ಶ್ರೀ ಬಾಲಸುಬ್ರಮಣ್ಯ, ಬೆಂಗಳೂರು
ಶ್ರೀ ಅಖಿಲೇಶ್, ಪುತ್ತೂರು
ಶ್ರೀ ಸುರೇಂದ್ರ ಕುಡುವ, ಉಜಿರೆ
ಶ್ರೀ ಪ್ರಿಜೇಶ್, ಧರ್ಮಸ್ಥಳ
ಶ್ರೀ ಜಿ. ಪುಟ್ಟಸ್ವಾಮಿ, ಉಜಿರೆ
ಶ್ರೀ ವಿ.ಎಸ್. ಕಲಚರಿ, ಬೆಂಗಳೂರು
ಶ್ರೀ ರಾಘವೇಂದ್ರ ಎಂ. ಮೊಗವೀರ, ಕೊಕ್ಕಡ
ಶ್ರೀ ನೀಲಕಂಠ, ನಾರ್ಯ
ಶ್ರೀ ಗಣೇಶ್ ಭಟ್, ಉಜಿರೆ
ಶ್ರೀ ಸುಶ್ಮಿತಾ, ನಾವೂರು
ಶ್ರೀ ಸುನಿಲ್ ಪಿ.ಎನ್, ಬೆಂಗಳೂರು
ಶ್ರೀ ಚಿತ್ರೇಶ್ ಶೆಟ್ಟಿ, ಉಜಿರೆ

## ವಸ್ತು ರೂಪದಲ್ಲಿ ದೇಣಿಗೆ ನೀಡಿದವರು

ಶ್ರೀ ಲಕ್ಷ್ಮೀನಾರಾಯಣ ಭಟ್, ಹತ್ಯಡ್ಕ
ಹವ್ಯಕ ವಲಯ ಉಜಿರೆ

## ಮಹನೀಯ ದಾನಿಗಳು

ಶ್ರೀ ಕಿರಣ್ ಕುಮಾರ್, ಕನ್ಯಾಡಿ
ಶ್ರೀ ರುದ್ರ ದೇವಾಡಿಗ, ಉಡುಪಿ
ಡಾ. ಕೃಷ್ಣಮೂರ್ತಿ ಟಿ, ಉಜಿರೆ
ಶ್ರೀ ಸುಭಾಶ್ ಎನ್. ಸಾಲಿಯಾನ್, ಕೊರಂಗ್ರಪಾಡಿ ಸೊಸೈಟಿ, ಉಡುಪಿ
ಶ್ರೀ ಹರೀಶ್ ಗಂಭೀರ್, ಬೆಂಗಳೂರು
ಶ್ರೀ ಗೀತಾ ಗಜಾನನ ಅನ್ವೇಕರ್, ಮುಂಬೈ
ಶ್ರೀ ವಲೇರಿಯನ್ ಮೋನಿಸ್, ಮಂಗಳೂರು
ಶ್ರೀ ಉಮೇಶ್ ಬಿ. ಪವಾರ್, ಮುಂಬೈ
ಶ್ರೀ ನಗೂರ್ ಜಯವಂತ ಪ್ರಭು, ಬೆಂಗಳೂರು
ರೊ। ಪ್ರಕಾಶ್ ಪ್ರಭು, ಉಜಿರೆ
ಶ್ರೀ ಲಕ್ಷ್ಮೀನಾರಾಯಣ ಭಟ್
ಶ್ರೀ ಪ್ರಭಾಕರ್ ಹೆಗ್ಡೆ ಮಹಾವೀರ ಏಜೆನ್ಸಿ, ಉಜಿರೆ
ಶ್ರೀ ರಜತ್ ರಾವ್, ಧರ್ಮಸ್ಥಳ

## ಸಪ್ಟೆಂಬರ್ ತಿಂಗಳ ಸೇವಾ ಕಾರ್ಯಗಳು

| | | |
|---|---|---|
| 1. | ಗಾಲಿಕುರ್ಚಿ ವಿತರಣೆ | – 4 |
| 2. | ಕಮೋಡೊ ಗಾಲಿಕುರ್ಚಿ ವಿತರಣೆ | – 1 |
| 3. | ವಾಕರ್ ವಿತರಣೆ | – 1 |
| 4. | ನೀರಿನ ಹಾಸಿಗೆ | – 2 |
| 5. | ಸೆಲ್ಫ್ ಕೇರ್ ಮತ್ತು ಮೆಡಿಕಲ್ ಕಿಟ್ | – 53 |
| 6. | ಗಾಳಿಯ ಹಾಸಿಗೆ | – 1 |
| 7. | ಹಾಸಿಗೆ | – 2 |

*The world worries about disability more than disabled people do*

# ಕೊಕ್ಕಡದಲ್ಲಿ 28ನೇ ಉಚಿತ ಟೈಲರಿಂಗ್ ತರಬೇತಿ ಶಿಬಿರ









ಸೇವಾಭಾರತಿ (ರಿ.), ಕನ್ಯಾಡಿ ಇದರ ನೇತೃತ್ವದಲ್ಲಿ ಸಬಲಿನಿ ಯೋಜನೆಯಡಿ ಶ್ರೀ ರಾಮ ಸೇವಾ ಟ್ರಸ್ಟ್ (ರಿ.), ಕೊಕ್ಕಡ ಶ್ರೀದುರ್ಗಾ ಮಾತೃಮಂಡಳಿ ಕನ್ಯಾಡಿ ಇವುಗಳ ಸಹಭಾಗಿತ್ವದಲ್ಲಿ ಮಹಿಳೆಯರಿಗಾಗಿ ಉಚಿತ 28ನೇ ಟೈಲರಿಂಗ್ ತರಬೇತಿ ಶಿಬಿರದ ಉದ್ಘಾಟನಾ ಸಮಾರಂಭವು ಸಪ್ಟೆಂಬರ್ 16 ರಂದು ಕೊಕ್ಕಡದ ಶ್ರೀರಾಮ ಸೇವಾಮಂದಿರದಲ್ಲಿ ನಡೆಯಿತು.

ಶ್ರೀ ಮಹಾಗಣಪತಿ ಸೇವಾ ಟ್ರಸ್ಟ್ (ರಿ.), ಕೊಕ್ಕಡ ಅಧ್ಯಕ್ಷರಾದ ಕೆ.ಕೃಷ್ಣ ಭಟ್ ಶಿಬಿರವನ್ನು ಉದ್ಘಾಟಿಸಿ, ಶಿಬಿರವನ್ನುದ್ದೇಶಿಸಿ ಮಾತನಾಡಿ ಶುಭಹಾರೈಸಿದರು.

ಕಾರ್ಯಕ್ರಮದಲ್ಲಿ ಸೇವಾಭಾರತಿ ಕನ್ಯಾಡಿಯ ಅಧ್ಯಕ್ಷೆ ಹಾಗೂ ಬೆಳ್ತಂಗಡಿ ತಾಲೂಕು ಮಹಿಳಾ ಸಹಕಾರಿ ಸಂಘ ಇದರ ಸಿಇಒ ಸ್ವರ್ಣಗೌರಿ ಟೈಲರಿಂಗ್ ಕಲಿಯುವುದರಿಂದ ಬೇರೆ ಬೇರೆ ರೀತಿಯ ಸ್ವ–ಉದ್ಯೋಗದ ಅವಕಾಶವಿರುತ್ತದೆ. ಪ್ರಸ್ತುತ ಕಾಲಘಟ್ಟದಲ್ಲಿ ಮಹಿಳೆಯರು ಯಾರಿಗೂ ಅವಲಂಬಿತವಾಗದೆ ಸ್ವಾವಲಂಬಿ ಜೀವನವನ್ನು ನಡೆಸುವುದು ಅತ್ಯಗತ್ಯವೆಂದು ತಿಳಿಸಿದರು.

ದಕ್ಷಿಣಕನ್ನಡ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್‌ನ ನಿರ್ದೇಶಕರು ಹಾಗೂ ಪ್ರಾಥಮಿಕ ಕೃಷಿಪತ್ತಿನ ಸಹಕಾರಿ ಸಂಘ, ಕೊಕ್ಕಡ ಅಧ್ಯಕ್ಷರಾದ ಕುಶಾಲಪ್ಪಗೌಡ, ಪ್ರಾಥಮಿಕ ಕೃಷಿಪತ್ತಿನ ಸಹಕಾರಿ ಸಂಘ ಕೊಕ್ಕಡ ಉಪಾಧ್ಯಕ್ಷರಾದ ಈಶ್ವರ ಭಟ್ ಹಿತ್ತಿಲು, ಶ್ರೀರಾಮ ಸೇವಾ ಟ್ರಸ್ಟ್ (ರಿ.), ಕೊಕ್ಕಡದ ಅಧ್ಯಕ್ಷರು ಹಾಗೂ ಸೇವಾಭಾರತಿ (ರಿ.), ಕನ್ಯಾಡಿಯ ಕಾರ್ಯದರ್ಶಿ ಬಾಲಕೃಷ್ಣ, ಮಹಿಳಾ ಲೈಂಗಿಕ ಕಿರುಕುಳ ತಡೆಗಟ್ಟುವಿಕೆ ಸಮಿತಿ ಅಧ್ಯಕ್ಷೆ ಕೆ. ವಸಂತಿ ಗೌಡ, ಡಾ। ಗಣೇಶ್ ಪ್ರಸಾದ್ ಅಂಬಿಕಾ ಕ್ಲಿನಿಕ್ ಕೊಕ್ಕಡ, ಶ್ರೀದುರ್ಗಾ ಮಾತೃ ಮಂಡಳಿ ಕನ್ಯಾಡಿ ಅಧ್ಯಕ್ಷರಾದ ಶಾಂತ ಪಿ.ಶೆಟ್ಟಿ, ಟೈಲರಿಂಗ್ ತರಬೇತುದಾರರಾದ ಗೀತಾ ಕೊಕ್ಕಡ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಸೇವಾಭಾರತಿ ಕನ್ಯಾಡಿಯ ಅನುಸರಣೆ ಮತ್ತು ಹಣಕಾಸು ವ್ಯವಸ್ಥಾಪಕ ಮೋಹನ್ ಎಸ್. ಸ್ವಾಗತಿಸಿ, ಸೇವಾಭಾರತಿ ಕನ್ಯಾಡಿಯ ಅಕೌಂಟೆಂಟ್ ಕು. ಅಕ್ಷತಾ ಕಾರ್ಯಕ್ರಮ ನಿರೂಪಿಸಿ, ಶ್ರೀರಾಮ ಸೇವಾ ಟ್ರಸ್ಟ್(ರಿ.), ಕಾರ್ಯದರ್ಶಿ ಶಶಿ ಕೊಕ್ಕಡ ಧನ್ಯವಾದವಿತ್ತರು.

ಒಟ್ಟು 63 ಮಂದಿ ಶಿಬಿರಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

*I dont need easy, I just need possible*

# ಸೇವಾಭಾರತಿಯಿಂದ "ಸೇವಾಶ್ರೇಷ್ಠ–2024" ಪುರಸ್ಕಾರ



ಸೇವಾಭಾರತಿ ಕನ್ಯಾಡಿ ಮತ್ತು ದಿವ್ಯಾಂಗ ರಕ್ಷಣಾ ಸಮಿತಿ ಉಡುಪಿ ಜಿಲ್ಲೆ ಇವುಗಳ ಆಶ್ರಯದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ವಿಶೇಷ ಚೇತನರ ಸಬಲೀಕರಣ ಇಲಾಖೆಗಳ ಸಹಕಾರದಲ್ಲಿ ವಿಶ್ವ ಬೆನ್ನುಹುರಿ ಅಪಘಾತ ದಿನಾಚರಣೆಯ ಪ್ರಯುಕ್ತ 3 ದಿನಗಳ ಉಡುಪಿ ಜಿಲ್ಲಾ ಸಮಾವೇಶ – 2024 ಮತ್ತು 26ನೇ ಉಚಿತ ವೈದ್ಯಕೀಯ ತಪಾಸಣೆ ಮಾಹಿತಿ ಹಾಗೂ ಜಾಗೃತಿ ಶಿಬಿರದ ಉದ್ಘಾಟನಾ ಸಮಾರಂಭವು ಸಪ್ಟೆಂಬರ್ 4 ರಂದು ಕೂಸಮ್ಮ ಶಂಭು ಶೆಟ್ಟಿ ಹಾಜಿ ಅಬ್ದುಲ್ಲ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಅಜ್ಜರಕಾಡು ಉಡುಪಿಯಲ್ಲಿ ನಡೆಯಿತು

ಈ ಸಂದರ್ಭದಲ್ಲಿ ಕೊಪ್ಪ ಪ್ರಶಮನೀ ಆಸ್ಪತ್ರೆಯ ಆರ್ಥೋಪೆಡಿಕ್ ಸರ್ಜನ್ ಡಾ. ಉದಯಶಂಕರ ಎಚ್.ಜಿ ಇವರು ಮಾಡಿದಂತಹ ಸೇವಾ ಕಾರ್ಯಗಳನ್ನು ಗುರುತಿಸಿ, ಸೇವಾಭಾರತಿ ಸಂಸ್ಥೆಯ ವತಿಯಿಂದ "ಸೇವಾಶ್ರೇಷ್ಠ –2024" ಗೌರವವನ್ನು ನೀಡಿ ಸನ್ಮಾನಿಸಲಾಯಿತು.

ವೈದ್ಯಕೀಯ ಕ್ಷೇತ್ರದಲ್ಲಿ ತನ್ನನ್ನು ತಾನು ತೊಡಗಿಸಿಕೊಂಡು "ಸರ್ವರೋಗ ಪ್ರಶಮನೀ" ಆಸ್ಪತ್ರೆಯನ್ನು ಸ್ಥಾಪಿಸುವ ಮೂಲಕ ಗ್ರಾಮೀಣ ಪ್ರದೇಶದ ಜನರ ಜೀವನದಲ್ಲಿ ಆಶಾಕಿರಣವಾಗಿದ್ದಾರೆ. ಸೇವಾಭಾರತಿ ಸಂಸ್ಥೆಯ ಹಲವಾರು ಕಾರ್ಯಚಟುವಟಿಕೆಯಲ್ಲಿ ಕೈಜೋಡಿಸಿದ್ದು ಸಾಮಾಜಿಕ ಸೇವೆ, ಆರೋಗ್ಯ ಸೇವೆ ಮತ್ತು ವಿಕಲಚೇತನರ ಕ್ಷೇತ್ರದಲ್ಲಿ ಮಾಡಿದ ಅನುಪಮ ಸಾಧನೆಯನ್ನು ಪರಿಗಣಿಸಿ ಸೇವಾಧಾಮ ಬೆನ್ನುಹುರಿ ಅಪಘಾತಕ್ಕೊಳಗಾದವರ ಪುನಶ್ಚೇತನ ಕೇಂದ್ರ ಸೌತಡ್ಕದ ವತಿಯಿಂದ ಮನಪೂರ್ವಕವಾಗಿ ಅಭಿನಂದಿಸಿ "ಸೇವಾಶ್ರೇಷ್ಠ 2024" ಗೌರವಕ್ಕೆ ಭಾಜನರಾಗಿದ್ದಾರೆ.

# ಉಡುಪಿ ಜಿಲ್ಲೆಯಲ್ಲಿ ಗಾಲಿಕುರ್ಚಿ ಜಾಥಾ





26ನೇ ಉಚಿತ ವೈದ್ಯಕೀಯ ತಪಾಸಣೆ ಮಾಹಿತಿ ಹಾಗೂ ಜಾಗೃತಿ ಶಿಬಿರದಲ್ಲಿ ಗಾಲಿಕುರ್ಚಿ ಜಾಥಾವನ್ನು ಹಮ್ಮಿಕೊಳ್ಳಲಾಗಿತ್ತು. ಜನಸಾಮಾನ್ಯರಿಗೆ ಬೆನ್ನುಹುರಿ ಅಪಘಾತದ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಹಾಗೆ ಬೆನ್ನುಹುರಿ ಅಪಘಾತಕ್ಕೊಳಗಾದ ದಿವ್ಯಾಂಗರನ್ನು ಮುಖ್ಯವಾಹಿನಿಗೆ ಕರೆತರುವ ಉದ್ದೇಶದಿಂದ ಸಪ್ಟೆಂಬರ್ 5 ರಂದು ಜಿಲ್ಲಾ ಆಸ್ಪತ್ರೆ ಅಜ್ಜರಕಾಡು, ಉಡುಪಿಯಲ್ಲಿ ಗಾಲಿಕುರ್ಚಿ ಜಾಥಾವನ್ನು ನಡೆಸಲಾಯಿತು.

ಈ ಸಂದರ್ಭದಲ್ಲಿ ಶ್ರೀ ಕೆ. ಉದಯ ಕುಮಾರ್ ಶೆಟ್ಟಿ ಬಿಜೆಪಿ ಮಂಗಳೂರು ವಿಭಾಗ ಪ್ರಭಾರಿ ಇವರು ಹಸಿರು ನಿಶಾನೆಯನ್ನು ತೋರಿಸಿ ಜಾಥಾಕ್ಕೆ ಚಾಲನೆಯನ್ನು ನೀಡಿದರು. ಕೂಸಮ್ಮ ಶಂಭು ಶೆಟ್ಟಿ ಸ್ಮಾರಕ ಹಾಜಿ ಅಬ್ದುಲ್ಲಾ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಿಂದ ಪ್ರಾರಂಭಿಸಿ ಚಿತ್ತರಂಜನ್ ಸರ್ಕಲ್ ಮೂಲಕ ಸಿಟಿ ಸೆಂಟರ್ ಸರ್ವಿಸ್ ಬಸ್‌ಸ್ಟ್ಯಾಂಡ್ ನಗರ ಪಂಚಾಯತ್, ಮೆಸ್ಕಾಂ ರಸ್ತೆ ಮುಖಾಂತರ ಹಿಂತಿರುಗಿ ಆಸ್ಪತ್ರೆಯ ತನಕ ಜಾಥಾವನ್ನು ಮಾಡಲಾಯಿತು. ಒಟ್ಟು 15 ಮಂದಿ ಬೆನ್ನುಹುರಿ ಅಪಘಾತಕ್ಕೊಳಗಾದ ದಿವ್ಯಾಂಗರೊಂದಿಗೆ ಸೇವಾಭಾರತಿ ಸಿಬ್ಬಂದಿವರ್ಗ ಹಾಗೂ ವಿದ್ಯಾರ್ಥಿಗಳು ಸೇರಿದಂತೆ 100 ಮಂದಿ ಜಾಥಾದಲ್ಲಿ ಭಾಗವಹಿಸಿದ್ದರು.

# ಸೇವಾಧಾಮದಲ್ಲಿ ಪುನಶ್ಚೇತನಗೊಂಡ ಸನಿವಾಸಿಗಳ ಅನಿಸಿಕೆ

ಶಾಂತಾ ಆದ ನಾನು ಹಾವೇರಿ ಜಿಲ್ಲೆಯ ಹೀರೆಕೆರೂರು ತಾಲೂಕಿನ ತಾವರಗಿ ಗ್ರಾಮದಿಂದ ಬಂದಿರುತ್ತೇನೆ. ನನಗೆ ಡೆಲಿವರಿ ಆಗಿ ಎರಡು ತಿಂಗಳಿಗೆ ನನಗೆ ನಡೆಯಲು ಆಗುತ್ತಿರಲಿಲ್ಲ. ಮಂಗಳೂರಿನ ಎ.ಜೆ. ಆಸ್ಪತ್ರೆಯಲ್ಲಿ ಚೆಕಪ್ ಮಾಡಿಸಿದಾಗ ಡಾಕ್ಟರ್ ನಿಮಗೆ ಬೆನ್ನಿನಲ್ಲಿ ವೀಕ್ನೆಸ್ ಇದೆ ಅದಕ್ಕೆ ಸರ್ಜರಿ ಮಾಡಬೇಕೆಂದು ಹೇಳಿದರು. ಅದರಂತೆ ನಾವು ಸರ್ಜರಿ ಮಾಡಿಸಿದೆವು. ನಾನು ಆಸ್ಪತ್ರೆಯಲ್ಲಿ ಇರುವಾಗ ಮನು ಸರ್ ಮತ್ತು ಗಣೇಶ್ ಸರ್ ಭೇಟಿ ಮಾಡಿದರು. ನನಗೆ ಸೇವಾಧಾಮದ ಸೇವೆಗಳ ಬಗ್ಗೆ ಹೇಳಿದರು. ಆಮೇಲೆ ಸೇವಾಧಾಮಕ್ಕೆ ಡಿಸೆಂಬರ್ 27, 2023ಗೆ ಬಂದಿರುತ್ತೇನೆ. ನಾನು 3 ತಿಂಗಳ ತರಬೇತಿಯನ್ನು ಮುಗಿಸಿದ್ದೇನೆ ಮೂರು ತಿಂಗಳಿಗೆ ಥೆರಪಿಯನ್ನು ನನಗೆ ತುಂಬಾ ಚೆನ್ನಾಗಿ ಹೇಳಿಕೊಟ್ಟಿದ್ದಾರೆ. ನಾನು ಬರುವಾಗ ಮಲಗಿದ ಸ್ಥಿತಿಯಲ್ಲಿ ಬಂದಿದ್ದೆ. ಸೇವಾಧಾಮಕ್ಕೆ ಬಂದ ನಂತರ ಯೋಗ ಮತ್ತು ಥೆರಪಿಯನ್ನು ಚೆನ್ನಾಗಿ ಮಾಡಿಕೊಂಡು ಇವಾಗ ನನ್ನ ಕೆಲಸವನ್ನು ನಾನೆ ಮಾಡಿಕೊಳ್ಳುತ್ತಿದ್ದೇನೆ. ನಾನು 05/04/2024 ರಂದು ಡಿಸ್ಚಾರ್ಜ್ ಆಗಿರುತ್ತೇನೆ ಹಾಗೂ ನನಗೆ ಮುಂದೆ ಬರುವ ಸಮಸ್ಯೆಗಳ ಬಗ್ಗೆ ಇಲ್ಲಿ ಅರಿವು ಮೂಡಿಸಿರುತ್ತಾರೆ. ಇದೆಲ್ಲದಕ್ಕೂ ಅವಕಾಶ ಮಾಡಿಕೊಟ್ಟ ಸೇವಾಭಾರತಿಯ ಅಧ್ಯಕ್ಷರು, ಸಂಸ್ಥಾಪಕರು ಕಾರ್ಯದರ್ಶಿಗಳು ಹಾಗೂ ಸಿಬ್ಬಂದಿವರ್ಗದವರಿಗೆ ನನ್ನ ಧನ್ಯವಾದಗಳು.

ಇತಿ ನಿಮ್ಮ ವಿಶ್ವಾಸಿ, **ಶಾಂತಾ, ಹಾವೇರಿ**

*Life would be tragic if it weren't funny*

## ಸೇವಾಧಾಮ 7ನೇ ವರ್ಷಕ್ಕೆ ಪಾದಾರ್ಪಣೆ: ಯಶಸ್ವಿ ಸೇವಾಕಾರ್ಯಗಳ ಹಿನ್ನೋಟ

(ಸೆ. 16, 2018 ರಿಂದ ಸೆ. 16, 2024ರ ವರೆಗೆ)

SEVA BHARATHI
सेवा ही परमो धर्मः

### SEVABHARATHI

Sevabharathi Achievements in Nutshell
Up to 30th September 2024
District Covered
(Dakshina Kannada, Udupi, Kodagu, Chikkamagalur, Uttar Kannada, Hassan)

| Services Provided - Sevadhama | Number |
|---|---|
| Identified People with Spinal Cord Injury | 688 |
| Rehabilitated People with Spinal Cord Injury (PwSCI) | 220 |
| Medical Camps Held (Belthangady, Puttur, Sullia, Ujire, Koppa, Moodbidri, Thumbe, Mangalore, Kundapura, Karkala , Mudigere, Kumta, Sirsi, Hassan, Sringeri, Madikeri, Tarikere and Udupi) | 26 |
| Wheelchairs Distributed | 315 |
| Calipers Provided | 63 |
| Walkers given | 87 |
| Home Accessibility like (Ramp, Toilets Provided) | 48 |
| Assistance for Self Employment | 113 |
| Medical Intervention | 323 |
| Surgical Assistance | 16 |
| Hospital Visited (Including PHC, THC, CHC) | 140 |
| Panchayats Visited | 100 |
| Medical/Self-Care Kits Distributed | 1055 |
| Grocery kit distributed | 343 |
| Solar Inverter | 46 |
| BP/Diabetic Machines | 100 |
| Taluk Covered | 48 |
| **Services Provided-Arogyam** | **Number** |
| Blood Donation Camp Organized | 97 |
| Unit's collected | 10,000+ |
| Ambulance services | 329 |
| **Services Provided-Sabalini** | **Number** |
| Tailoring Camp | 28 |
| Women's Empowered | 650 |

Sevadhama Premises provided Free by
Sri Mahaganapathy Seva Trust®, Southadka

## ಸೇವಾ ಸಂಗಮ

## ಆನ್‌ಲೈನ್ ಕಾರ್ಯಗಾರ

**ಬೆನ್ನುಹುರಿ ಅಪಘಾತಕ್ಕೊಳಗಾದವರಿಗಾಗಿ**
**(ಆನ್ಲೈನ್ ಕಾರ್ಯಾಗಾರ-26 )**
**ಒತ್ತಡ ಗಾಯ ನಿರ್ವಹಣೆ ಬಗ್ಗೆ ಮಾಹಿತಿ ಕಾರ್ಯಗಾರ**

**ಸಂಪನ್ಮೂಲ ವ್ಯಕ್ತಿ**




**ಕು| ಗಂಗಾ ಮಂಡೇಲ್**
**ಪೀರ್ ಟ್ರೈನರ್, ಅಸೋಸಿಯೇಷನ್ ಆಫ್ ಪೀಪಲ್ ವಿಥ್ ಡಿಸಿಬಿಲಿಟಿ, ಬೆಂಗಳೂರು (APD)**

ದಿನಾಂಕ : 14/09/2024 Live On: Google Meet

ಸಮಯ: 4pm to 5pm https://meet.google.com/bpf-tjfd-ezg

SEVA BHARATHI
सेवा ही परमो धर्मः

**ಸೇವಾಭಾರತಿ ಕನ್ಯಾಡಿ -II**
**9945491241**
**www.sevaabharathi.org**




ಸಪ್ಟೆಂಬರ್ ತಿಂಗಳ ಸೇವಾಸಂಗಮ ಆನ್‌ಲೈನ್ ಮಾಹಿತಿ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಕುಮಾರಿ ಗಂಗಾ ಮಂಡೇಲ್, ಪೀರ್‌ಟ್ರೈನರ್ ಅಸೋಸಿಯೇಷನ್‌ಆಫ್ ಪೀಪಲ್ ವಿಥ್ ಡಿಸಿಬಿಲಿಟಿ ಬೆಂಗಳೂರು ಇವರು ಬೆನ್ನುಹುರಿ ಅಪಘಾತಕ್ಕೊಳಗಾದ ದಿವ್ಯಾಂಗರಿಗಾಗಿ ಒತ್ತಡಗಾಯ ನಿರ್ವಹಣೆ ಕುರಿತು ಮಾಹಿತಿ ಇತ್ತರು. ಕಾರ್ಯಗಾರದಲ್ಲಿ ಒಟ್ಟು 55 ಮಂದಿ ಭಾಗವಹಿಸಿದ್ದರು.

*Once you choose hope, anything's possible*

# ವಿಶ್ವ ಬೆನ್ನುಹುರಿ ಅಪಘಾತ ದಿನಾಚರಣೆಯ ಪ್ರಯುಕ್ತ ಉಜಿರೆಯಲ್ಲಿ ಗಾಲಿಕುರ್ಚಿ ಜಾಥಾ









ಸೇವಾಭಾರತಿ (ರಿ.), ಕನ್ಯಾಡಿ – ಸೇವಾಧಾಮ ಇದರ ನೇತೃತ್ವದಲ್ಲಿ ರೋಟರಿ ಕ್ಲಬ್ ಬೆಳ್ತಂಗಡಿ ಮತ್ತು ರಾಷ್ಟ್ರೀಯ ಸೇವಾ ಯೋಜನೆ, ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಕಾಲೇಜು, ಉಜಿರೆ ಇವುಗಳ ಸಹಭಾಗಿತ್ವದಲ್ಲಿ ವಿಶ್ವ ಬೆನ್ನುಹುರಿ ಅಪಘಾತ ದಿನಾಚರಣೆಯ ಪ್ರಯುಕ್ತ ಗಾಲಿಕುರ್ಚಿ ಜಾಥಾ ಮತ್ತು ಬೆನ್ನುಹುರಿ ಅಪಘಾತದ ಬಗ್ಗೆ ಮಾಹಿತಿ ಕಾರ್ಯಾಗಾರದ ಉದ್ಘಾಟನಾ ಸಮಾರಂಭವು ಸಪ್ಟೆಂಬರ್ 21 ರಂದು ಶ್ರೀ ಶಾರದಾ ಮಂಟಪ, ಉಜಿರೆಯಲ್ಲಿ ನಡೆಯಿತು.

ಕರ್ನಾಟಕ ಸರಕಾರದ ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಪ್ರತಾಪಸಿಂಹ ನಾಯಕ್ ಇವರು ಹಸಿರು ನಿಶಾನೆಯನ್ನು ತೋರಿಸಿ ಜಾಥಾಕ್ಕೆ ಚಾಲನೆಯನ್ನು ನೀಡಿದರು. ಬೆನ್ನುಹುರಿ ಅಪಘಾತದ ಬಗ್ಗೆ ಜನಸಾಮಾನ್ಯರಲ್ಲಿ ಜಾಗೃತಿಗಾಗಿ SDM PG Centre ಪಾರ್ಕಿಂಗ್‌ನಿಂದ ಪ್ರಾರಂಭಿಸಿ ಉಜಿರೆ ಸರ್ಕಲ್ ಮುಖಾಂತರ ಶ್ರೀ ಶಾರದಾ ಮಂಟಪಕ್ಕೆ ಜಾಥಾವನ್ನು ಮಾಡಲಾಯಿತು. ಒಟ್ಟು 21 ಮಂದಿ ಬೆನ್ನುಹುರಿ ಅಪಘಾತಕ್ಕೊಳಗಾದ ದಿವ್ಯಾಂಗರೊಂದಿಗೆ ಉಜಿರೆ ಓಶಿಯನ್ ಪರ್ಲ್‌ನ ಬ್ಯಾಂಕ್ವೆಟ್ ಮ್ಯಾನೇಜರ್ ಉದಯ ಶೆಟ್ಟಿ, ಓಶಿಯನ್ ಪರ್ಲ್‌ನ ಜನರಲ್ ಮ್ಯಾನೇಜರ್ ಉಪೇಂದ್ರ ಶಾನ್‌ಭೋಗ್, ಸೇವಾಭಾರತಿಯ ಹಿತೈಷಿಗಳು, ಸಿಬ್ಬಂದಿವರ್ಗ ಹಾಗೂ ಉಜಿರೆಯ ಎಸ್‌ಡಿಎಂ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಘಟಕದ ಸ್ವಯಂಸೇವಕರು ಸೇರಿದಂತೆ 150 ಮಂದಿ ಜಾಥಾದಲ್ಲಿ ಭಾಗ–ವಹಿಸಿದ್ದರು.

ಬೆಳ್ತಂಗಡಿ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರಾದ ಶ್ರೀ ಹರೀಶ್ ಪೂಂಜ ಸಭಾ ಕಾರ್ಯಕ್ರಮವನ್ನು ಉದ್ಘಾಟಿಸಿ, ಸೇವಾಧಾಮ ಸಂಸ್ಥೆಯು ಮಾಡುತ್ತಿರುವ ಸೇವಾಕಾರ್ಯಗಳ ಬಗ್ಗೆ ಪ್ರಶಂಸೆಯನ್ನು ವ್ಯಕ್ತಪಡಿಸಿ ಕಾರ್ಯಕ್ರಮಕ್ಕೆ ಶುಭಹಾರೈಸಿದರು.

ಕಾರ್ಯಕ್ರಮದಲ್ಲಿ ಒಟ್ಟು 6 ಮಂದಿ ಬೆನ್ನುಹುರಿ ಅಪಘಾತಕ್ಕೊಳಗಾದ ದಿವ್ಯಾಂಗರಿಗೆ ಸೆಲ್ಫ್‌ಕೇರ್ ಕಿಟ್ ಮತ್ತು ಇಬ್ಬರಿಗೆ ಬೆಡ್‌ಗಳನ್ನು ಉಜಿರೆ ಮಹಾವೀರ ಏಜೆನ್ಸಿಯ ಪ್ರಭಾಕರ್ ಇವರು ಹಸ್ತಾಂತರಿಸಿದರು.

ಶ್ರೀ ಜನಾರ್ದನ ಸ್ವಾಮಿ ದೇವಸ್ಥಾನದ ಆಡಳಿತ ಮೊಕ್ತಸರರಾದ ಶ್ರೀ ಶರತ್‌ಕೃಷ್ಣ ಪಡ್ವೆಟ್ನಾಯ, ರೊ। ಪ್ರಕಾಶ್ ಪ್ರಭು ರೋಟರಿ ಕ್ಲಬ್ ಬೆಳ್ತಂಗಡಿ, ಡಾ। ಮಹೇಶ್ ಶೆಟ್ಟಿ ಯೋಜನಾಧಿಕಾರಿಗಳು ರಾಷ್ಟ್ರೀಯ ಸೇವಾಯೋಜನೆ SDM ಕಾಲೇಜು ಉಜಿರೆ, ಶ್ರೀ ಕೆ.ಪುರಂದರ ರಾವ್ ಸೇವಾಧಾಮ ಸಂಚಾಲಕರು, ಶ್ರೀಮತಿ ದೀಪಾ ಆರ್.ಪಿ. ಯೋಜನಾಧಿಕಾರಿಗಳು NSS, SDM ಕಾಲೇಜು ಉಜಿರೆ, ಸೇವಾಭಾರತಿ ಕನ್ಯಾಡಿಯ ಅಧ್ಯಕ್ಷರಾದ ಶ್ರೀಮತಿ ಸ್ವರ್ಣಗೌರಿ, ಡಾ। ಆನ್ ಮೇರಿ ಜಾನ್ M D PMR, KMC ಮಂಗಳೂರು ಇವರುಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಅಪರಾಹ್ನ ಕೆ.ಎಂ.ಸಿ.ಯ ಡಾ. ಆನ್ ಮೇರಿ ಜಾನ್ ದಿವ್ಯಾಂಗರ ತಪಾಸಣೆ ನಡೆಸಿ, ಸಮಾಲೋಚಿಸಿದರು.

ಸೇವಾಧಾಮ ಸಂಸ್ಥಾಪಕರಾದ ಕೆ.ವಿನಾಯಕ ರಾವ್ ಪ್ರಾಸ್ತಾವಿಕ ಮಾತುಗಳನ್ನಾಡಿ, ಸೇವಾಭಾರತಿಯ ಕಾರ್ಯದರ್ಶಿ ಬಾಲಕೃಷ್ಣ ಸ್ವಾಗತಿಸಿ, NSS ಸ್ವಯಂಸೇವಕಿ ವರ್ಷ ವಿ. ಕಾರ್ಯಕ್ರಮವನ್ನು ನಿರೂಪಿಸಿ, NSS ಸ್ವಯಂಸೇವಕ ಸುದರ್ಶನ ಧನ್ಯವಾದವಿತ್ತರು. ಎಸ್.ಡಿ.ಎಂ. ಎನ್.ಎಸ್.ಎಸ್. ಘಟಕದ 120 ಮಂದಿ ಸ್ವಯಂಸೇವಕರು ಭಾಗವಹಿಸಿದ್ದರು.

# ಬೆನ್ನುಹುರಿ ಅಪಘಾತ ಮತ್ತು ಅದರ ನಿರ್ವಹಣೆ ಬಗ್ಗೆ ಅರಿವು

## ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು, ಅಜ್ಜರಕಾಡು







ಉಡುಪಿಯಲ್ಲಿ ಬೆನ್ನುಹುರಿ ಅಪಘಾತಕ್ಕೊಳಗಾದವರಿಗಾಗಿ ಉಚಿತ ಆರೋಗ್ಯ ತಪಾಸಣೆ, ಜಾಗೃತಿ ಶಿಬಿರ ಹಾಗೂ ಗಾಲಿಕುರ್ಚಿ ಜಾಥಾದ ಜೊತೆಗೆ 3 ಕಾಲೇಜಿಗೆ ಭೇಟಿ ನೀಡಿ ಸುಮಾರು 201 ಮಂದಿ ವಿದ್ಯಾರ್ಥಿಗಳಿಗೆ ಬೆನ್ನುಹುರಿ ಅಪಘಾತ ಮತ್ತು ಅದರ ನಿರ್ವಹಣೆ ಬಗ್ಗೆ ಮಾಹಿತಿ ನೀಡಲಾಯಿತು.

ಉಡುಪಿ ಜಿಲ್ಲೆಯ ಪೂರ್ಣಪ್ರಜ್ಞಾ ಕಾಲೇಜಿಗೆ ಹಿರಿಯ ಪ್ರಬಂಧಕರಾದ ಚರಣ್ ಕುಮಾರ್ ಎಂ. ಹಾಗೂ ಹಾಸನ ಮತ್ತು ಚಿಕ್ಕಮಗಳೂರು ಕ್ಷೇತ್ರ ಸಂಯೋಜಕರಾದ ನಾಗಾರ್ಜುನ್ ಡಿ.ಎ. ಭೇಟಿನೀಡಿ ಬೆನ್ನುಹುರಿ ಅಪಘಾತ ಹಾಗೂ ಅದರ ನಿರ್ವಹಣೆ ಬಗ್ಗೆ 71 ವಿದ್ಯಾರ್ಥಿಗಳಿಗೆ ಅರಿವು ಮೂಡಿಸಿದರು.

ಡಾ. ಜಿ ಶಂಕರ್ ಸರಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಅಧ್ಯಯನ ಕೇಂದ್ರಕ್ಕೆ ಹಿರಿಯ ಪ್ರಬಂಧಕರಾದ ಚರಣ್ ಕುಮಾರ್ ಎಂ., ಬೆನ್ನುಹುರಿ ಅಪಘಾತಕ್ಕೊಳಗಾದ ವಿಶೇಷಚೇತನ ಸರ್ವೋತ್ತಮ ಹಾಗೂ ದಕ್ಷಿಣಕನ್ನಡ ಮತ್ತು ಕೊಡಗು ಕ್ಷೇತ್ರ ಸಂಯೋಜಕರಾದ ಕುಸುಮಾಧರ್ ಭೇಟಿನೀಡಿ 80 ವಿದ್ಯಾರ್ಥಿಗಳಿಗೆ ಮಾಹಿತಿ ಇತ್ತರು.

ಬಾಲಕಿಯರ ಸರಕಾರಿ ಪದವಿ ಪೂರ್ವ ಕಾಲೇಜು ಅಜ್ಜರಕಾಡುಗೆ ಹಿರಿಯ ಪ್ರಬಂಧಕರಾದ ಚರಣ್ ಕುಮಾರ್ ಎಂ. ಹಾಗೂ ಹಾಸನ ಮತ್ತು ಚಿಕ್ಕಮಗಳೂರು ಕ್ಷೇತ್ರ ಸಂಯೋಜಕರಾದ ನಾಗಾರ್ಜುನ್ ಡಿ.ಎ. ಭೇಟಿ ನೀಡಿ 50 ವಿದ್ಯಾರ್ಥಿಗಳಿಗೆ ಕಾರ್ಯಾಗಾರವನ್ನು ನಡೆಸಿಕೊಟ್ಟರು.

## ಪೂರ್ಣಪ್ರಜ್ಞಾ ಕಾಲೇಜು, ಉಡುಪಿ






## ಡಾ. ಜಿ. ಶಂಕರ್ ಸರಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಅಧ್ಯಯನ ಕೇಂದ್ರ, ಉಡುಪಿ






# ತಮ್ಮ ವಿಶೇಷ ದಿನವನ್ನು ವಿಶಿಷ್ಟ ರೀತಿಯಲ್ಲಿ ಆಚರಿಸಿ ಮಾದರಿಯಾದವರು



ಸೇವಾಧಾಮದಲ್ಲಿ ಪುನಶ್ಚೇತನ ಪಡೆಯುತ್ತಿರುವ ದಿವ್ಯಾಂಗರಿಗೆ ಒಂದು ಹೊತ್ತಿನ ಊಟಕ್ಕಾಗಿ ದೇಣಿಗೆಯನ್ನು ನೀಡುವ ಮೂಲಕ ತಮ್ಮ ವಿಶೇಷ ದಿನವನ್ನು ಆಚರಿಸಿ ಎಲ್ಲರಿಗೂ ಮಾದರಿಯಾಗಿದ್ದೀರಿ. ತಮ್ಮ ಈ ಸೇವಾಕಾರ್ಯಕ್ಕೆ ಕೃತಜ್ಞತೆಗಳು...





ಡಾ। ಮುರಳಿಕೃಷ್ಣ ಇರ್ವತ್ರಾಯ
ಕಕ್ಕಿಂಜೆ



ಶ್ರೀಮತಿ ಬಬಿತಾ, ಕನ್ಯಾಡಿ



ಶ್ರೀ ಹರೀಶ್ ಗಂಭೀರ್, ಬೆಂಗಳೂರು



ಮಾಸ್ಟರ್ ಪನ್ವಿತ್



ಕುಮಾರಿ ರಕ್ಷಿತಾ ಮೆಲ್ಬೋರ್ನ್



ಮಾಸ್ಟರ್ ಶಿವಾಂಶ್, ಕನ್ಯಾಡಿ



ಮಾಸ್ಟರ್ ವಿಹಾಗ್ ರಾವ್
ಬೆಳ್ತಂಗಡಿ



ಶ್ರೀಮತಿ ಜೋಯ್ಸ್ ಫಿರೇರ
ಬೆಂಗಳೂರು



ಬೇಬಿ ಶ್ರೀ ಬಿಲ್ವಾನಿ, ಉಜಿರೆ

## ಪುಣ್ಯಸ್ಮರಣೆ



ದಿ। ಅನಂತ ಸುಬ್ರಾಯ ಗೋಖಲೆ

# ಸಪ್ಟೆಂಬರ್ ತಿಂಗಳಲ್ಲಿ ಉಚಿತ ಮತ್ತು ರಿಯಾಯಿತಿ ದರದಲ್ಲಿ ಗಾಲಿಕುರ್ಚಿ ವಿತರಣೆ



ಶ್ರೀಮತಿ ಭಾರತಿ, ಸುಳ್ಯ



ಶ್ರೀ ಸುಂದರ ಮುಗೇರ, ಹತ್ಯಡ್ಕ




ಶ್ರೀಮತಿ ನೇತ್ರಾವತಿ, ಸುಳ್ಯ



ಶ್ರೀ ಸುರೇಶ್ ಕೋಟೇಶ್ವರ್,
ಕುಂದಾಪುರ

# ಬೆನ್ನುಹುರಿ ಅಪಘಾತದ ಬಗ್ಗೆ ಮಾಹಿತಿ ಕಾರ್ಯಾಗಾರ

ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ (ಸ್ವಾಯತ್ತ) ಕಾಲೇಜು, ಉಜಿರೆ









ವಿಶ್ವ ಬೆನ್ನುಹುರಿ ಅಪಘಾತ ದಿನಾಚರಣೆಯ ಪ್ರಯುಕ್ತ ಉಜಿರೆಯಲ್ಲಿ ನಡೆದ ಗಾಲಿಕುರ್ಚಿ ಜಾಥಾ ಮತ್ತು ಬೆನ್ನುಹುರಿ ಅಪಘಾತದ ಬಗ್ಗೆ ಮಾಹಿತಿ ಕಾರ್ಯಾಗಾರವನ್ನು ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ (ಸ್ವಾಯತ್ತ) ಕಾಲೇಜಿನ ರಾಷ್ಟ್ರೀಯ ಸೇವಾಯೋಜನೆಯ ವಿದ್ಯಾರ್ಥಿಗಳಿಗೆ ಬೆನ್ನುಹುರಿ ಅಪಘಾತ ಮತ್ತು ಅದರ ನಿರ್ವಹಣೆ ಬಗ್ಗೆ ಮಾಹಿತಿ ನೀಡಲಾಯಿತು.

ಸೇವಾಭಾರತಿಯ ಹಿರಿಯ ಪ್ರಬಂಧಕರಾದ ಚರಣ್ ಕುಮಾರ್ ಎಂ. ಹಾಗೂ ಅಕೌಂಟೆಂಟ್ ಅಕ್ಷತಾ ಸುಮಾರು 111 ಮಂದಿ ವಿದ್ಯಾರ್ಥಿಗಳಿಗೆ ಕಾರ್ಯಾಗಾರವನ್ನು ನಡೆಸಿಕೊಟ್ಟರು.

# ಸೇವಾಧಾಮದಲ್ಲಿ ಸಂವಾದಾತ್ಮಕ ಕಾರ್ಯಾಗಾರ: ಮಾನವ ಸಂಬಂಧಗಳು ಮತ್ತು ಧನಾತ್ಮಕ ಮನೋಭಾವ




ಸೇವಾಧಾಮ ಪುನಶ್ಚೇತನ ಕೇಂದ್ರ ಸೌತಡ್ಕದಲ್ಲಿ ನಡೆದ 'ಸಿಬ್ಬಂದಿಗಳ ಸಾಮರ್ಥ್ಯ ನಿರ್ಮಾಣ ಕಾರ್ಯಕ್ರಮ'ದ ಅಡಿಯಲ್ಲಿ ಮಾನವ ಸಂಬಂಧಗಳು ಮತ್ತು ಧನಾತ್ಮಕ ಮನೋಭಾವದ ಕುರಿತು (Human Relations and Positive Attitude) ಸಂವಾದಾತ್ಮಕ ಕಾರ್ಯಾಗಾರವನ್ನು ಸಂಪನ್ಮೂಲ ವ್ಯಕ್ತಿಯಾಗಿ ಎಸ್‌ಡಿಎಂ ವಸತಿಯುತ ಪಿಯು ಕಾಲೇಜಿನ ನಿವೃತ್ತ ಪ್ರಾಂಶುಪಾಲರಾದ ಡಾ| ಟಿ. ಕೃಷ್ಣಮೂರ್ತಿ ನಡೆಸಿಕೊಟ್ಟರು.

ವ್ಯಕ್ತಿಗತ ಚಿಂತನೆಯಲ್ಲಿ ನಕಾರಾತ್ಮಕ ಮನೋಭಾವವನ್ನು ಹೊಂದಿದ್ದರೆ, ಅದರ ಪ್ರತಿಯಾಗಿ ಪಡೆಯಲಿರುವುದು ನಕಾರಾತ್ಮಕತೆ ಮಾತ್ರ. ಸಕಾರಾತ್ಮಕ ಮನೋಭಾವವನ್ನು ಕಾಪಾಡಿಕೊಳ್ಳಲು ಪ್ರಯತ್ನಿಸುವುದರಿಂದ ಸಂಬಂಧದ ಬಗ್ಗೆ ಕಾಳಜಿ ವಹಿಸುತ್ತೀರಿ ಎಂದರು. ನಿತ್ಯ ಜೀವನದ ಒತ್ತಡ ನಡುವೆ ಮಾನವೀಯ ಸಂಬಂಧಗಳು ಮತ್ತು ಧನಾತ್ಮಕ ಮನೋಭಾವನೆಯ ಪ್ರಾಮುಖ್ಯತೆಯ ಬಗೆಗೆ ಸವಿಸ್ತಾರವಾಗಿ, ಕ್ರಿಯಾತ್ಮಕ ಚಟುವಟಿಕೆಗಳೊಂದಿಗೆ ಮಾಹಿತಿ ಇತ್ತರು. ಸಂಸ್ಥೆಯ ಪರವಾಗಿ ಅವರನ್ನು ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಶ್ರೀ ಮಹಾಗಣಪತಿ ಸೇವಾ ಟ್ರಸ್ಟ್ (ರಿ.), ಕೊಕ್ಕಡ ಅಧ್ಯಕ್ಷರಾದ ಶ್ರೀ ಕೆ.ಕೃಷ್ಣ ಭಟ್, ಸೇವಾಭಾರತಿ ಸಂಸ್ಥೆಯ ಸಂಸ್ಥಾಪಕರಾದ ಶ್ರೀ ಕೆ.ವಿನಾಯಕ ರಾವ್, ಕಾರ್ಯದರ್ಶಿ ಶ್ರೀ ಬಾಲಕೃಷ್ಣ, ಸ್ವಯಂಸೇವಕರಾದ ಶ್ರೀ ಮೈಲಾರಿ ಉಪಸ್ಥಿತರಿದ್ದರು.

ಕಾರ್ಯಾಗಾರದಲ್ಲಿ ಸಂಸ್ಥೆಯ ಸಿಬ್ಬಂದಿವರ್ಗ, ಕೇಂದ್ರದ ಸನಿವಾಸಿಗಳು, ಆರೈಕೆದಾರರು ಹಾಗೂ ಸ್ವಯಂಸೇವಕರು ಸೇರಿ ಒಟ್ಟು 25 ಮಂದಿ ಭಾಗವಹಿಸಿದ್ದರು. ಸೇವಾಭಾರತಿಯ ಅಕೌಂಟೆಂಟ್ ಅಕ್ಷತಾ ಸ್ವಾಗತಿಸಿ, ನಿರೂಪಿಸಿ, ಹಿರಿಯ ಪ್ರಬಂಧಕರಾದ ಚರಣ್ ಕುಮಾರ್ ಎಂ. ಧನ್ಯವಾದವಿತ್ತರು.

# ಸೇವಾಧಾಮ ಪುನಶ್ಚೇತನ ಕೇಂದ್ರದಲ್ಲಿ ಫಲಾನುಭವಿಗಳಿಗೆ ವೈದ್ಯರಿಂದ ಸಮಾಲೋಚನೆ

ಸೇವಾಧಾಮ ಪುನಶ್ಚೇತನ ಕೇಂದ್ರದಲ್ಲಿ ಪ್ರತಿ ತಿಂಗಳು ಫಲಾನುಭವಿಗಳಿಗೆ ನಡೆಸುವಂತಹ ವೈದ್ಯರ ಸಮಾಲೋಚನೆಯಲ್ಲಿ ಸಪ್ಟೆಂಬರ್ ತಿಂಗಳಿನಂದು KMC ಮಂಗಳೂರು ಆಸ್ಪತ್ರೆಯ PMR ವಿಭಾಗದ ಡಾ| ಆನ್ ಮೇರಿ ಜಾನ್ ಸೇವಾಧಾಮಕ್ಕೆ ಭೇಟಿ ನೀಡಿದ್ದರು. ಫಲಾನುಭವಿಗಳನ್ನು ಪರೀಕ್ಷೆ ಮಾಡಿ ಅವರ ಆರೋಗ್ಯದ ಬಗ್ಗೆ ಮಾಹಿತಿಯನ್ನು ನೀಡಿದರು. ಈ ಸಮಾಲೋಚನೆಯಲ್ಲಿ 9 ಮಂದಿ ಫಲಾನುಭವಿಗಳು ಭಾಗವಹಿಸಿದ್ದರು.



## ನಿಮಗಿದು ತಿಳಿದಿರಲಿ

# ಮೂತ್ರನಾಳದ ಸೋಂಕು ಮತ್ತು ನಿರ್ವಹಣಾ ವಿಧಾನ

ಬೆನ್ನುಹುರಿ ಅಪಘಾತವಾದ ವ್ಯಕ್ತಿಗಳಿಗೆ ಪ್ರಮುಖವಾಗಿ ಕಾಡುವ ಸಮಸ್ಯೆಗಳೆಂದರೆ ಮೂತ್ರನಾಳದ ಸೋಂಕು. ಇದು ಅಪಘಾತವಾದ ವ್ಯಕ್ತಿಯ ಆರೋಗ್ಯದ ಮೇಲೆ ಬಹಳ ಪರಿಣಾಮ ಬೀರುತ್ತದೆ. ಕೆಲವರು ಮೂತ್ರನಳಿಕೆಯನ್ನು ಉಪಯೋಗಿಸದೆ ಹಾಗೆಯೇ ಹೊರತೆಗೆಯಲು ಬಳಸುತ್ತಾರೆ, ಇದರಿಂದ ಮೂತ್ರ ಚೀಲದಲ್ಲಿರುವ ಮೂತ್ರವು ಪೂರ್ತಿಯಾಗಿ ಹೊರಗೆ ಬರುವುದಿಲ್ಲ ಒಳಗಡೆಯಿರುವ ಮೂತ್ರವು ಶೇಖರಣೆಗೊಂಡು ಕಲ್ಲಿನ ರೀತಿಯಲ್ಲಿ ಪರಿವರ್ತನೆಗೊಂಡು ಇದರಿಂದ ಮೂತ್ರನಾಳದ ಸೋಂಕು ಕಾಣಿಸಿಕೊಳ್ಳುತ್ತದೆ. ಅಲ್ಲದೆ ಮೂತ್ರಪಿಂಡಗಳು ವೈಫಲ್ಯಗೊಳ್ಳುವ ಸಾಧ್ಯತೆ ಇರುತ್ತದೆ. ಹೆಚ್ಚು ಮಂದಿ ಮೂತ್ರನಳಿಕೆಯನ್ನು ಶಾಶ್ವತವಾಗಿ ಅಳವಡಿಸಿಕೊಂಡಿರುತ್ತಾರೆ ಇದನ್ನು ತಿಂಗಳಿಗೊಮ್ಮೆ ಬದಲಾಯಿಸುತ್ತಿರಬೇಕು ಅದರೂ ಕೆಲವರು 3 ತಿಂಗಳಾದರೂ ಬದಲಾಯಿಸದ ಕಾರಣ ಮೂತ್ರನಳಿಕೆಯಲ್ಲಿ ರೋಗಾಣುಗಳು ಉತ್ಪತ್ತಿಯಾಗುವುದರಿಂದ ಮೂತ್ರನಳಿಕೆ ಮುಚ್ಚುತ್ತದೆ ಮತ್ತು ಸೋಂಕು ಕಾಣಿಸಿಕೊಳ್ಳುತ್ತದೆ.

## ನಮ್ಮ ಯೋಜನೆಗಳು

**ಆರೋಗ್ಯಮ್ :** ರಕ್ತದಾನ ಶಿಬಿರಗಳ ಆಯೋಜನೆ ಮತ್ತು ಆ್ಯಂಬುಲೆನ್ಸ್ ಸೇವೆಗಳು.

**ಸಬಲಿನಿ :** ಮಹಿಳಾ ಸ್ವಾವಲಂಬನಕ್ಕಾಗಿ ವೃತ್ತಿ ತರಬೇತಿ.

**ಸೇವಾಧಾಮ :** ಬೆನ್ನುಹುರಿ ಅಪಘಾತಗೊಂಡವರಿಗಾಗಿ ಪುನಶ್ಚೇತನ ಕೇಂದ್ರ.

**ಸೇವಾಪಥ :** ಮಾಸಿಕ ಈ–ನ್ಯೂಸ್ ಲೆಟರ್ .

**ಸೇವಾ ಸಂಗಮ :** ಬೆನ್ನುಹುರಿ ಅಪಘಾತಗೊಂಡವರಿಗಾಗಿ ಆನ್‌ಲೈನ್ ಮೂಲಕ ಸಂಬಂಧಿತ ತಜ್ಞರಿಂದ ಮಾಹಿತಿ, ತರಬೇತಿ ಹಾಗೂ ಮಾರ್ಗದರ್ಶನ.

**ಆರೋಗ್ಯ ಬಿಂದು:** ಫಲಾನುಭವಿಗಳಿಗೆ ಕನಿಷ್ಠ ದರದಲ್ಲಿ ಸೆಲ್ಫ್‌ಕೇರ್ & ಮೆಡಿಕಲ್ ಕಿಟ್‌ಗಳು

### ತಾವು ಹೀಗೂ ನಮ್ಮ ಸಂಸ್ಥೆಯೊಂದಿಗೆ ಕೈಜೋಡಿಸಬಹುದಾಗಿದೆ

### ಸಂಸ್ಥೆಗೆ ದೇಣಿಗೆ ಮೂಲಕ ಸಹಕಾರ

| | |
|---|---|
| ರೂ. 2000/– | ನೀಡುವುದರ ಮೂಲಕ ಒಟ್ಟು ಫಲಾನುಭವಿಯ ಒಂದು ತಿಂಗಳ ಮೆಡಿಕಲ್ ಕಿಟ್‌ಗಳಿಗಾಗಿ ಸಹಕಾರ. |
| ರೂ. 6000/– | ನೀಡುವುದರ ಮೂಲಕ ಒಬ್ಬ ಫಲಾನುಭವಿಯ ಒಂದು ತಿಂಗಳ ಪುನಶ್ಚೇತನ ಚಿಕಿತ್ಸೆಗಾಗಿ ಸಹಕಾರ |
| ರೂ. 4500/– | ನೀಡುವುದರ ಮೂಲಕ ಫಲಾನುಭವಿಯ ಒಂದು ತಿಂಗಳ ಪುನಶ್ಚೇತನ ಚಿಕಿತ್ಸೆಯ ಸಂದರ್ಭ ಪೋಷಕರಿಗಾಗಿ ಸಹಕಾರ |
| ರೂ. 3000/– | ನೀಡುವುದರ ಮೂಲಕ ಸೇವಾಧಾಮದಲ್ಲಿ ಒಂದು ಹೊತ್ತಿನ ಊಟೋಪಚಾರಕ್ಕೆ ಸಹಕಾರ |
| ರೂ. 10000/– | ನೀಡುವುದರ ಮೂಲಕ ಸಮುದಾಯ ಭೇಟಿಗಾಗಿ ಸಹಕಾರ |
| ರೂ. 15000/– | ನೀಡುವುದರ ಮೂಲಕ ಒಬ್ಬ ಫಲಾನುಭವಿಗಳಿಗೆ ಒಂದು ಗಾಲಿಕುರ್ಚಿಯ ಕೊಡುಗೆ |
| ರೂ. 10000/– | ನೀಡುವುದರ ಮೂಲಕ ಕೇಂದ್ರದಲ್ಲಿ ಹುಟ್ಟು ಹಬ್ಬದ ಆಚರಣೆ ಮಾಡುವುದು |

### Account Details

237887292019623@cnrb

| | |
|---|---|
| A/c Holder | - M/s. Sevabharathi(R) |
| A/c No | - 02462200019623 |
| IFS Code | - CNRB0010246 |
| Bank | - Canara Bank, Dharmasthala Branch |
| A/c Type | - Current Account |

| | |
|---|---|
| A/c Holder | - M/s. Sevabharathi(R) |
| A/c No | - 01682200072637 |
| IFS Code | - CNRB0010168 |
| Bank | - Canara Bank, Kokkada Branch |

**DONATE & JOIN US IN OUR MISSION**

# ತೆಂಗಿನಕಾಯಿ ಸಿಪ್ಪೆ ತೆಗೆಯುವ ಕಾರ್ಯವೇ ಕುಂದಾಪುರದ ಇಕ್ಬಾಲ್‌ಕುಟುಂಬಕ್ಕೆ ಆಧಾರವಾಯಿತು



**ಬೆನ್ನುಹುರಿ ಅಪಘಾತವು ಒಂದು ವಿಶಿಷ್ಟ ಮತ್ತು ಸಮಸ್ಯಾತ್ಮಕ ಸಮಸ್ಯೆಯಾಗಿದ್ದು ವೈದ್ಯಕೀಯ ಉಪಚಾರ ಪಡೆದರೂ ಸಹ ಸಂಪೂರ್ಣ ಗುಣಮುಖರಾಗದೆ ಅನೇಕ ತೊಂದರೆಗಳು ಉಂಟಾಗುತ್ತವೆ. ಚಿಕಿತ್ಸೆಯನ್ನು ಪಡೆಯದಿದ್ದರಂತು ಸಮಸ್ಯೆಗಳು ದ್ವಿಗುಣಗೊಳ್ಳುತ್ತದೆ ಕೆಲವೊಂದು ಸಮಯದಲ್ಲಿ ಆಕಸ್ಮಿಕವಾಗಿ ಒಂದು ಕ್ಷಣ ಆಗುವ ಬೆನ್ನುಹುರಿ ಅಪಘಾತವು ವ್ಯಕ್ತಿಯ ಜೀವನದ ದಿಕ್ಕನ್ನೇ ಬದಲಾಯಿಸುತ್ತದೆ. ಅಂಥವರಲ್ಲಿ ಕುಂದಾಪುರ ತಾಲೂಕಿನ ಮೊಹಮ್ಮದ್ ಇಕ್ಬಾಲ್‌ರವರ ಯಶೋಗಾಥೆ ನಿಮ್ಮ ಮುಂದಿದೆ. ಇತ್ತ ಒಮ್ಮೆ ಕಣ್ಣು ಹಾಯಿಸಿ ನೋಡಿದಾಗ ಸ್ಫೂರ್ತಿಗೊಳ್ಳುತ್ತೇವೆ.**



ಮೊಹಮ್ಮದ್ ಇಕ್ಬಾಲ್ ಮೂಲತಃ ಕುಂದಾಪುರ ತಾಲೂಕಿನ ಗುಲ್ವಾಡಿ ಗ್ರಾಮದವರಾಗಿದ್ದು. ದಿ. ಹಮೀದ್ ಮತ್ತು ನೆಬಿಸ ಅವರ ಪುತ್ರರಾಗಿ ಜನಿಸಿದರು. ನಂತರ ನೂರ್ಜಾನ್ ಜೊತೆ ವೈವಾಹಿಕ ಜೀವನಕ್ಕೆ ಕಾಲಿಟ್ಟು ನದೀಮ್, ನಿಹಾನ್ ಎಂಬ ಇಬ್ಬರು ಮಕ್ಕಳ ಜೊತೆ ಸುಖವಾದ ಸಂಸಾರವನ್ನು ನಡೆಸುತ್ತಿದ್ದಾರೆ. ಸರಕಾರಿ ಶಾಲೆಯಾದ ಬೆಂಗರೆಯಲ್ಲಿ ತಮ್ಮ ಪ್ರಾಥಮಿಕ ಶಿಕ್ಷಣವನ್ನು ಕಲಿತು ನಂತರ ಪ್ರೌಡಶಿಕ್ಷಣವನ್ನು ಕುಂದಾಪುರದ ಮಾವಿನಕಟ್ಟೆಯಲ್ಲಿ ಮುಗಿಸಿದರು. ತದನಂತರ 5– 6 ವರ್ಷಗಳ ತನಕ ಕಟ್ಟಡದ ಗೋಡೆ ನಿರ್ಮಾಣದ ಕೆಲಸವನ್ನು ಮಾಡುತ್ತಾ ತನ್ನ ಜೀವನವನ್ನು ಸಾಗಿಸುತ್ತಿದ್ದ ಇಕ್ಬಾಲ್ ತನ್ನ ಸ್ವಂತ ಕಾಲ ಮೇಲೆ ನಿಂತು ಕಾಂಟ್ರಾಕ್ಟರ್ ಆಗಿ ಸುಮಾರು 20 ಮಂದಿಯನ್ನು ಇಟ್ಟುಕೊಂಡು ಕೆಲಸವನ್ನು ಮಾಡಿಸುತ್ತಿದ್ದರು. ಹೀಗೆ ಕೆಲಸ ಮಾಡುವಾಗ ಡಿಸೆಂಬರ್ 17–2022 ರಂದು ರಾಡ್ ತುಂಡಾಗಿ ಕೆಳಗೆ ಬಿದ್ದು ಬೆನ್ನುಹುರಿ ಅಪಘಾತವಾಯಿತು. ನಂತರ ಕುಂದಾಪುರದ ಚಿನ್ಮಯಿ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆದುಕೊಂಡು ಸಂಪೂರ್ಣ ಗುಣಮುಖರಾಗದೆ 3 ತಿಂಗಳುಗಳ ಕಾಲ ಹಾಸಿಗೆಯಲ್ಲೇ ಮಲಗಿದ್ದರೂ ಆಗ ಅವರಿಗೆ ಎರಡು ಕಾಲುಗಳಲ್ಲಿ ಸ್ಪರ್ಶ ಜ್ಞಾನವಿಲ್ಲದೆ ನಿಲ್ಲಲು ಮತ್ತು ಕೂರಲು ಸಾಧ್ಯವಾಗದೆ ತನ್ನ ಎಲ್ಲಾ ಕೆಲಸಗಳಿಗೂ ಕುಟುಂಬದವರಿಗೆ ಅವಲಂಬನೆಯಾಗಿದ್ದರು. ಪ್ರತಿದಿನ ಮಸಾಜನ್ನು ಮಾಡಿಸಿಕೊಂಡು ಸ್ವಲ್ಪ ಸ್ವಲ್ಪವಾಗಿ ಚೇತರಿಸಿಕೊಳ್ಳುತ್ತಿದ್ದರು. KMC ಮಣಿಪಾಲ ಆಸ್ಪತ್ರೆಗೆ ಚಿಕಿತ್ಸೆಗಾಗಿ ಬಂದಾಗ ವೈದ್ಯರ ಸಲಹೆಯ ಮೇರೆಗೆ ಸೇವಾಧಾಮಕ್ಕೆ ಭೇಟಿನೀಡಿ ಸೇವಾಧಾಮದ ಸಂಸ್ಥಾಪಕರಾದ ಕೆ.ವಿನಾಯಕ ರಾವ್ ರವರ ಜೊತೆ ಮಾತನಾಡಿ ಪುನಶ್ಚೇತನವನ್ನು ಪಡೆದುಕೊಳ್ಳಲು ಮುಂದಾದರು. ಸೇವಾಧಾಮದಲ್ಲಿ ತೆರಪಿಯನ್ನು ಪಡೆದುಕೊಂಡು ಸ್ಟಿಕ್ ಹಿಡಿದು ನಡೆದಾಡಲು ಪ್ರಯತ್ನಿಸಿದರು.  ಮೂರು ತಿಂಗಳ ಕಾಲ ಪುನಶ್ಚೇತವನ್ನು ಪಡೆದ ನಂತರ ನಾನು ಹೆಚ್ಚಿನ ಬದಲಾವಣೆಯನ್ನು ಕಂಡುಕೊಂಡೆ ಮತ್ತು ಸೇವಾಧಾಮದಲ್ಲಿ ಕಾರು ಓಡಿಸುವುದು ಹೇಗೆ ಎಂದು ಕಲಿತುಕೊಂಡೆ ಇದೀಗ ಒಬ್ಬನೇ ಪಕ್ಕದ ಊರಿಗೆ ಕಾರು ಚಲಾಯಿಸಿಕೊಂಡು ಹೋಗಬಲ್ಲೆ ಎಂದು ಸಂತೋಷವನ್ನು ವ್ಯಕ್ತಪಡಿಸುತ್ತಾರೆ. ಇಂಥಹ ಸಂದಿಗ್ಧ ಪರಿಸ್ಥಿತಿಯಲ್ಲಿ ಇಕ್ಬಾಲ್‌ರವರ ಜೊತೆ ಬೆನ್ನೆಲುಬಾಗಿ ನಿಂತವರು ಅವರ ಕುಟುಂಬದವರು. ಸುಮಾರು 7– 8 ತಿಂಗಳಿಂದ ತೆಂಗಿನಕಾಯಿಯ ಸಿಪ್ಪೆಯನ್ನು ಸುಲಿದು ತನ್ನ ಜೀವನವನ್ನು ಸಾಗಿಸುತ್ತಿದ್ದಾರೆ. ಯಾರ ಸಹಾಯವನ್ನು ಪಡೆದುಕೊಳ್ಳದೇ ಯಾರಿಗೂ ಅವಲಂಬಿತವಾಗದೆ ಒಬ್ಬರೆ ದಿನದಲ್ಲಿ 700 ತೆಂಗಿನಕಾಯಿಯ ಸಿಪ್ಪೆಯನ್ನು ಸುಲಿದು ದಿನಕ್ಕೆ 800 ರೂ. ಸಂಪಾದಿಸಿ ತನ್ನ ಜೀವನವನ್ನು ವಿಜಯಪಥದ ಕಡೆಗೆ ಕೊಂಡೊಯ್ಯುತ್ತಿದ್ದಾರೆ. ಅವರ ಬಾಳಿಗೆ ಶುಭ ಹಾರೈಸೋಣವೇ.